# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 65 SUNDAY 17-05-2026 PRGI No : KNKAN/26/A0962 Pages:4 Rs.2.00 M: 9742418836


## ಇಂಧನ ಬೆಲೆ ಏರಿಕೆ ಜನವಿರೋಧಿ ಕ್ರಮ, ಪ್ರಧಾನ ಮಂತ್ರಿ ರಾಜೀನಾಮೆ ನೀಡಬೇಕು: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಲೀಟರ್‌ಗೆ 3 ರೂಪಾಯಿ ಹೆಚ್ಚಿಸಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ. ಇದನ್ನು "ಜನವಿರೋಧಿ" ತೀರ್ಮಾನ ಎಂದು ಹೇಳಿದರು. ಈ ಬೆಲೆ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ದೇಶದ ಆರ್ಥಿಕತೆಯನ್ನು ದುರುಪಯೋಗವಾಗಿ ನಿರ್ವಹಿಸಿ ಜನರನ್ನು ವಿಫಲಗೊಳಿಸಿರುವ ಕಾರಣಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ತಕ್ಷಣ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಸುವ ಮೂಲಕ ಮೋದಿ ಸರ್ಕಾರ ತನ್ನ ವೈಫಲ್ಯಗಳ ಭಾರವನ್ನು ಜನರ ಮೇಲೆ ಹಾಕುತ್ತಿದೆ. ಕೇಂದ್ರ ಸರ್ಕಾರದ ವಿಫಲ ವಿದೇಶಾಂಗ ನೀತಿ, ದುರ್ಬಲ ಆರ್ಥಿಕ ನಿರ್ವಹಣೆ ಮತ್ತು ಬೆಲೆ ಏರಿಕೆಯ ಹೊರೆ ಜನರು ಅನುಭವಿಸುತ್ತಿದ್ದಾರೆ. ಜನರನ್ನು ರಕ್ಷಿಸುವ ಬದಲು, ಮೋದಿ ಸರ್ಕಾರ ಅವರನ್ನು ಆದಾಯ ಸಂಗ್ರಹಿಸುವ ಸಾಧನವಾಗಿ ಬಳಸುತ್ತಿದೆ ಎಂದು ಅವರು ಆರೋಪಿಸಿದರು.

ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ 106 ರೂಪಾಯಿ ಮತ್ತು ಡೀಸೆಲ್ ಬೆಲೆ ಸುಮಾರು 94 ರೂಪಾಯಿಯಷ್ಟಿದೆ. ಈ ಬೆಲೆ ಏರಿಕೆ ಪೆಟ್ರೋಲ್ ಬಂಕ್‌ಗಳಲ್ಲೇ ನಿಲ್ಲುವುದಿಲ್ಲ. ಇದರಿಂದ ಸಾರಿಗೆ ವೆಚ್ಚ, ತರಕಾರಿ, ಹಾಲು ಹಾಗೂ ಇತರೆ ಅಗತ್ಯ ವಸ್ತುಗಳ ಬೆಲೆ ಹೆಚ್ಚುತ್ತದೆ. ರೈತರು, ಕಾರ್ಮಿಕರು, ಸಣ್ಣ ವ್ಯಾಪಾರಿಗಳು ಮತ್ತು ಮಧ್ಯಮ ವರ್ಗದ ಜನರು ತೀವ್ರ ಹೊಡೆತ ಅನುಭವಿಸಲಿದ್ದಾರೆ ಎಂದು ಹೇಳಿದರು.

ಕಚ್ಚಾ ತೈಲದ ಬೆಲೆ ಕಡಿಮೆಯಾಗಿದ್ದಾಗ ಮೋದಿ ಸರ್ಕಾರ ಜನರಿಗೆ ಯಾವುದೇ ಪರಿಹಾರ ನೀಡಲಿಲ್ಲ. ಬೃಹತ್ ಪ್ರಮಾಣದಲ್ಲಿ ತೆರಿಗೆ ಸಂಗ್ರಹಿಸಿ ತನ್ನ ಖಜಾನೆಯನ್ನು ತುಂಬಿಕೊಂಡಿತು. ಆದರೆ ಇಂಧನದ ಬೆಲೆ ಏರಿದಾಗ ಜನರನ್ನೇ ಗುರಿಯಾಗಿಸುತ್ತದೆ. ಇದು ಆಡಳಿತವಲ್ಲ, ಶೋಷಣೆ ಎಂದು ಅವರು ಆರೋಪಿಸಿದರು.

ಮೋದಿ ಅವರು ತಮ್ಮ ಬಂಡವಾಳಶಾಹಿ ಸ್ನೇಹಿತರನ್ನು ರಕ್ಷಿಸುವುದರಲ್ಲೇ ಆಸಕ್ತಿ ಹೊಂದಿದ್ದಾರೆ ಎಂದು ಆರೋಪಿಸಿದ ಸಿದ್ದರಾಮಯ್ಯ, ಸಾಮಾನ್ಯ ಜನರಿಗೆ ಸಹಾಯ ಮಾಡುವುದರಲ್ಲಿಯೂ ಬದ್ಧತೆಯನ್ನು ಪ್ರಧಾನಮಂತ್ರಿ ತೋರಿಸಬೇಕು ಎಂದು ಹೇಳಿದರು.

## ಕೇರಳ ನಾಯಕತ್ವ ಬಿಕ್ಕಟ್ಟು ಬಗೆಹರಿಸಿದ ಕಾಂಗ್ರೆಸ್ ಹೈಕಮಾಂಡ್ ಗೆ ಮುಂದಿನ ಸವಾಲು ಕರ್ನಾಟಕ!



ಬೆಂಗಳೂರು: ಕೇರಳದಲ್ಲಿ ತೀವ್ರ ಲಾಬಿ ಮತ್ತು ಆಂತರಿಕ ಒತ್ತಡದ ನಡುವೆ ಸಿಎಂ ಆಯ್ಕೆ ಕಗ್ಗಂಟನ್ನು ಬಗೆಹರಿಸಿದ ಕಾಂಗ್ರೆಸ್ ಹೈಕಮಾಂಡ್ ಗೆ ಈಗ ನೆರೆಯ ಕರ್ನಾಟಕ ಮುಂದಿನ ಸವಾಲು ಆಗಿದೆ.

ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಹುಟ್ಟುಹಬ್ಬವಾದ ಮೇ 15 ರಂದು ಮುಖ್ಯಮಂತ್ರಿ ಪಟ್ಟ ಸಿಗುವ ವಿಶ್ವಾಸದಲ್ಲಿ ಅವರ ಅಭಿಮಾನಿಗಳಿದ್ದರು. ಆದರೆ, ಈ ನಿರೀಕ್ಷೆಯೂ ಹುಸಿಯಾಗಿದ್ದು, ಯಾವಾಗ ಸಿಡಿದ್ದೇಳುತ್ತಾರೋ ಗೊತ್ತಿಲ್ಲ.

ನವೆಂಬರ್‌ನಲ್ಲಿ ಪ್ರಮುಖ ಚರ್ಚೆಯೊಂದು ನಡೆದಿತ್ತು. ಸಂಭಾವ್ಯ ನಾಯಕತ್ವ ಬದಲಾವಣೆ ಬಗ್ಗೆಗಿನ ಊಹಾಪೋಹಗಳು ರಾಜ್ಯ ಘಟಕದಲ್ಲಿ ಅನಿಶ್ಚಿತತೆಗೆ ಕಾರಣವಾಗಿತ್ತು. ಆ ಸಮಯದಲ್ಲಿ, ಕಾಂಗ್ರೆಸ್ ಹೈಕಮಾಂಡ್ ನಿರ್ಣಾಯಕ ಪರಿಹಾರಕ್ಕೆ ಬರದೆ ಬಿಕ್ಕಟ್ಟನ್ನು ತಡೆಯುವಲ್ಲಿ ಯಶಸ್ವಿಯಾಗಿತ್ತು.

ಈಗ ಕೇರಳದ ಸಮಸ್ಯೆ ಹೆಚ್ಚಾಗಿ ಇತ್ಯರ್ಥವಾಗಿರುವುದರಿಂದ ಪಕ್ಷದೊಳಗಿನ ಗಮನವು ಕರ್ನಾಟಕದತ್ತ ತಿರುಗಿದೆ. ಇಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವಿನ ಗದ್ದುಗೆ ಗುದ್ದಾಟ ಮತ್ತೊಮ್ಮೆ ತೀವ್ರಗೊಳ್ಳುವ ನಿರೀಕ್ಷೆಯಿದೆ.

ಸಿದ್ದರಾಮಯ್ಯ ಸಂಪುಟ ಪುನರ್ ರಚನೆ ಮತ್ತು ಖಾಲಿ ಸಚಿವ ಸ್ಥಾನಗಳನ್ನು ಭರ್ತಿ ಮಾಡಲು ಒತ್ತಾಯಿಸುತ್ತಿದ್ದರೂ, ಶಿವಕುಮಾರ್ ಈ ಅವಧಿಯಲ್ಲಿಯೇ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳುವ ಮಹತ್ವಾಕಾಂಕ್ಷೆಯನ್ನು ವ್ಯಕ್ತಪಡಿಸುತ್ತಲೇ ಬಂದಿದ್ದಾರೆ. ಈ ಹಂತದಲ್ಲಿ ಸಿದ್ದರಾಮಯ್ಯ ಆಡಳಿತ ಮತ್ತು ಶಾಸಕಾಂಗ ಪಕ್ಷದ ಮೇಲೆ ತಮ್ಮ ಹಿಡಿತವನ್ನು ಬಲಪಡಿಸುವಲ್ಲಿ ಯಶಸ್ವಿಯಾದರೆ, ಸಚಿವ ಸಂಪುಟ ಪುನರ್ ರಚನೆಯು ಶಿವಕುಮಾರ್ ಅವರ ನಾಯಕತ್ವ ಆಶಯವನ್ನು ದುರ್ಬಲಗೊಳಿಸುವ ಸಾಧ್ಯತೆಯಿದೆ.

ಇದೇ ವೇಳೆ ಸಿದ್ದರಾಮಯ್ಯ ಬಣವು ಕಾಯುವ ಆಟವಾಡುತ್ತಿದೆ ಎನ್ನಲಾಗುತ್ತಿದೆ. ಆದರೆ ಶಿವಕುಮಾರ್ ಬಣ ಈ ಹಿಂದೆ ಮಾಡಿಕೊಂಡ ಅಧಿಕಾರ ಹಂಚಿಕೆ ಒಪ್ಪಂದವನ್ನು ಕಾಂಗ್ರೆಸ್ ಹೈಕಮಾಂಡ್ ಗೆ ಹೇಳುತ್ತಲೇ ಬಂದಿದೆ. ಸಂಪುಟ ವಿಸ್ತರಣೆ ಅಥವಾ ಪುನರ್ ರಚನೆ ಸಂದರ್ಭದಲ್ಲಿ ಸಚಿವ ಸ್ಥಾನಗಳನ್ನು ಬಯಸುವ ಹಲವಾರು ಕಾಂಗ್ರೆಸ್ ಶಾಸಕರು ಪಕ್ಷದ ನಾಯಕತ್ವದ ಮೇಲೆ ಮತ್ತಷ್ಟು ಒತ್ತಡ ಹೇರುತ್ತಿದ್ದಾರೆ. ಮುಂದಿನ ಕೆಲವು ದಿನಗಳಲ್ಲಿ, ಸರ್ಕಾರದ ಸ್ಥಿರತೆ ಮತ್ತು ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಕಾಂಗ್ರೆಸ್ ಹೈಕಮಾಂಡ್ ಕರ್ನಾಟಕದ ರಾಜಕೀಯ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುವ ನಿರೀಕ್ಷೆಯಿದೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಚೇರಿಯ ಹೊರಗೆ ಮತ್ತು ರಾಜ್ಯದ ಹಲವಾರು ಭಾಗಗಳಲ್ಲಿ ಶಿವಕುಮಾರ್ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರುವ ಪೋಸ್ಟರ್‌ಗಳು ಕಾಣಿಸಿಕೊಂಡಿದ್ದು, ಕೆಲವು ಪೋಸ್ಟರ್‌ಗಳು ಅವರನ್ನು "ಕರ್ನಾಟಕದ ಮುಂದಿನ ಮುಖ್ಯಮಂತ್ರಿ" ಎಂದು ಉಲ್ಲೇಖಿಸಿವೆ. ಮೈಸೂರಿನಲ್ಲಿಯೂ ಶಿವಕುಮಾರ್ ಅವರ ಬೆಂಬಲಿಗರು ಅವರನ್ನು ಮುಂದಿನ ಮುಖ್ಯಮಂತ್ರಿ ಎಂದು ಬಿಂಬಿಸಿ ಹುಟ್ಟುಹಬ್ಬದ ಕೇಕ್ ಅನ್ನು ಕತ್ತರಿಸಿದ್ದಾರೆ. ಒಟ್ಟಾರೇ ರಾಜ್ಯದಲ್ಲಿ ಬಿಕ್ಕಟ್ಟನ್ನು ಬಗೆಹರಿಸುವ ನಿಟ್ಟಿನಲ್ಲಿ ಹೈಕಮಾಂಡ್ ಮುಂದಾಗುವ ಸಾಧ್ಯತೆಯಿದೆ.

## ಮೂಲ ಕಾಂಗ್ರೆಸ್ಸಿಗರ ಕಡೆಗಣನೆ: ಸಚಿವ ಸ್ಥಾನದ ಆಕಾಂಕ್ಷೆ ವ್ಯಕ್ತಪಡಿಸಿ ಶಾಸಕ ನಾಡಗೌಡ ಅಸಮಾಧಾನ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಕಳೆದ 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸಿಪಾಯಿಯಾಗಿ ಕೆಲಸ ಮಾಡಿದ್ದೇನೆ. ಆದರೆ ಪಕ್ಷದಲ್ಲಿ ಮೂಲ ಕಾಂಗ್ರೆಸ್ಸಿಗರನ್ನು ಕಡೆಗಣಿಸಲಾಗುತ್ತಿದೆ. ಹಿರಿತನಕ್ಕೆ ತಕ್ಕ ಗೌರವ ಸಿಗುತ್ತಿಲ್ಲ ಎಂಬ ನೋವು ನನಗಷ್ಟೇ ಅಲ್ಲ, ನನ್ನ ಕ್ಷೇತ್ರದ ಕಾರ್ಯಕರ್ತರಿಗೂ ಇದೆ" ಎಂದು ಹಿರಿಯ ಶಾಸಕ ಸಿ.ಎಸ್. ನಾಡಗೌಡ (ಅಪ್ಪಾಜಿ) ತಮ್ಮ ಆಂತರಿಕ ಬೇಗುದಿಯನ್ನು ಹೊರಹಾಕಿದರು.

ಶುಕ್ರವಾರ ಪಟ್ಟಣದ ತಮ್ಮ ನಿವಾಸದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಸಂಪುಟ ಪುನಾರಚನೆ ಹಾಗೂ ಸಚಿವ ಸ್ಥಾನದ ಕುರಿತು ಅವರು ಸುದೀರ್ಘವಾಗಿ ಮಾತನಾಡಿದರು.

**ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ:**

"ಸಂಪುಟ ಪುನಾರಚನೆ ಎಂದಾಗ ಉತ್ತರ ಕರ್ನಾಟಕ ಭಾಗದಿಂದ ಎಚ್.ಕೆ. ಪಾಟೀಲ ಹಾಗೂ ನನ್ನ ಹೆಸರು ಮುನ್ನೆಲೆಗೆ ಬರುತ್ತದೆ. ಆದರೆ ನಮಗೆ ಸಿಗಬೇಕಾದ ಗೌರವದ ಸ್ಥಾನಮಾನ ಈವರೆಗೆ ಸಿಕ್ಕಿಲ್ಲ. ನಾನು ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿದ್ದು, ಹೈಕಮಾಂಡ್ ಈ ಬಾರಿ ನನಗೆ ನ್ಯಾಯ ಒದಗಿಸುತ್ತದೆ ಎಂಬ ನಿರೀಕ್ಷೆಯಲ್ಲಿದ್ದೇನೆ. ಪ್ರಾಮಾಣಿಕವಾಗಿ ಪಕ್ಷಕ್ಕಾಗಿ ದುಡಿಯುವವರನ್ನು ಗುರುತಿಸುವ ಕೆಲಸವಾಗಬೇಕು" ಎಂದರು.

**ಪಕ್ಷದ ಒಳಗಿನ ಷಡ್ಯಂತ್ರಕ್ಕೆ ಆಕ್ರೋಶ:**

ನನಗೆ ಸಚಿವ ಸ್ಥಾನ ಸಿಗದಂತೆ ಪಕ್ಷದ ಒಳಗಡೆಯೇ ಕೆಲವರು ವ್ಯವಸ್ಥಿತವಾಗಿ ಲಾಬಿ ಮಾಡುತ್ತಿದ್ದಾರೆ. ನನ್ನ ವಿರುದ್ಧ ಷಡ್ಯಂತ್ರ ನಡೆಸುವ ಮೂಲಕ ನನಗೆ ಅಧಿಕಾರ ತಪ್ಪಿಸುತ್ತಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಇಂತಹ ಕುತಂತ್ರಗಳು ಇನ್ನು ಮುಂದೆ ನಡೆಯಬಾರದು. ನಮಗೂ ರಾಜಕಾರಣದ ಎಲ್ಲ ತಿರುವುಗಳು ಗೊತ್ತು, ನಮಗೂ ರಾಜಕಾರಣ ಮಾಡಲು ಬರುತ್ತದೆ ಎಂಬುದನ್ನು ತೋರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

**ಕಾಂಗ್ರೆಸ್‌ನವರಿಂದಲೇ ಪಕ್ಷಕ್ಕೆ ಧಕ್ಕೆ:**

"ಕೆಲವರು ಸಚಿವ ಸ್ಥಾನ ಗಿಟ್ಟಿಸಿಕೊಂಡು ತಮ್ಮ ಹಿಂಬಾಲಕರಿಗೆ ಮಾತ್ರ ಅಧಿಕಾರ ಕೊಡಿಸಲು ಷಡ್ಯಂತ್ರ ಮಾಡುತ್ತಿದ್ದಾರೆ. ಇಂತಹ ನಡವಳಿಕೆಯಿಂದ ಮೂಲ ಕಾಂಗ್ರೆಸ್ಸಿಗರಲ್ಲಿ ಆತಂಕ ಶುರುವಾಗಿದೆ. ಕಾಂಗ್ರೆಸ್ಸಿಗರಿಂದಲೇ ಕಾಂಗ್ರೆಸ್‌ಗೆ ಧಕ್ಕೆಯಾಗುತ್ತಿದೆ. ಸಚಿವ ಸ್ಥಾನ ಪಡೆದವರು ಹೇಳಿದಂತೆ ನಾವು ಕೇಳಿಕೊಂಡು ಬಿದ್ದಿರುತ್ತೇವೆ ಎಂಬ ಮನೋಭಾವ ಸರಿಯಲ್ಲ. ಪಕ್ಷದ ಆಂತರಿಕ ಬೇಗುದಿಯನ್ನು ಹೈಕಮಾಂಡ್ ಗಮನಿಸಬೇಕು" ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ನಾಯಕತ್ವ ಬದಲಾವಣೆ ಗೊಂದಲ ಬೇಡ:**

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತಾದ ಚರ್ಚೆಗಳಿಗೆ ಉತ್ತರಿಸಿದ ಅವರು, "ಸಿದ್ದರಾಮಯ್ಯ ಅವರ ಕುರ್ಚಿ ಸದ್ಯಕ್ಕೆ ಗಟ್ಟಿಯಾಗಿದೆ. ಶಾಸಕಾಂಗ ಪಕ್ಷದ ಸಭೆಯಲ್ಲಿ ನಾಯಕತ್ವ ಬದಲಾವಣೆ ಕುರಿತು ಯಾವುದೇ ಚರ್ಚೆ ನಡೆದಿಲ್ಲ. ಸಿದ್ದರಾಮಯ್ಯ ಅವರ ನಾಯಕತ್ವವನ್ನು ನಾನು ಒಪ್ಪಿದ್ದೇನೆ. ಡಿ.ಕೆ. ಶಿವಕುಮಾರ್ ಮತ್ತು ನಾವು ಒಟ್ಟಿಗೆ ರಾಜಕಾರಣ ಆರಂಭಿಸಿದವರು, ಅವರೂ ನಮಗೆ ಆಪ್ತರೇ. ಹೈಕಮಾಂಡ್ ಕೂಡಲೇ ಶಾಸಕರಲ್ಲಿರುವ ವೈಮನಸ್ಸು ನಿವಾರಿಸಿ ಗೊಂದಲಗಳಿಗೆ ತೆರೆ ಎಳೆಯಬೇಕು" ಎಂದು ಒತ್ತಾಯಿಸಿದರು.

ಈ ವೇಳೆ ಮಾಜಿ ಪುರಸಭೆ ಸದಸ್ಯ ಪಿಂಟು ಸಾಲಿಮನಿ,ಸೇರಿದಂತೆ ಉಪಸ್ಥಿತರಿದ್ದರು.

## ಇಂಜಿನ್‌ಲ್ಲಿ ತಾಂತ್ರಿಕ ದೋಷ, ಗದಗ ಕಣಗಿನಹಾಳ ಬಳಿ ನಿಂತ ರೈಲು..!




**ಬೆಳಗಾವಿ ವಾರ್ತೆ ಗದಗ:** ಇಂಜಿನ್‌ದಲ್ಲಿ ದೋಷ ಕಂಡು ಬಂದಿದ್ದರಿಂದ ಗದಗ ತಾಲೂಕಿನ ಕಣಗಿನಹಾಳ ಗ್ರಾಮದ ಬಳಿ ಯಶವಂತಪುರ–ವಿಜಯಪುರ ರೈಲು ಸುಮಾರು ಎರಡು ಗಂಟೆಗೂ ಹೆಚ್ಚು ಕಾಲ ನಿಲುಗಡೆಯಾಗಿ ಪ್ರಯಾಣಿಕರು ಪರದಾಡಿದ ಘಟನೆ ನಡೆದಿದೆ.

ಈ ರೈಲು ರಾತ್ರಿ 7.30ಕ್ಕೆ ಯಶವಂತಪುರದಿಂದ ಹೊರಟು ಬೆಳಿಗ್ಗೆ 6ಕ್ಕೆ ಗದಗ ಮೂಲಕ 11ಕ್ಕೆ ವಿಜಯಪುರ ತಲುಪಬೇಕಿತ್ತು. ಎರಡು ಗಂಟೆಗೂ ಹೆಚ್ಚು ಕಾಲ ರೈಲು ನಿಂತಲ್ಲೇ ನಿಂತಿದ್ದರಿಂದ ರೈಲಿನಲ್ಲಿದ್ದ ಚಿಕ್ಕ ಮಕ್ಕಳು ಹಾಲು, ಆಹಾರ ದೊರೆಯದೇ ಪರಾದಾಡಿದವು.

ಕೊಪ್ಪಳದ ತಳಕಲ್ ಬಳಿ ಇಂಜಿನಲ್ಲಿ ದೋಷ ಕಂಡು ಬಂದ ಬಗ್ಗೆ ರೈಲು ಚಾಲಕನಿಗೆ ಮಾಹಿತಿ ದೊರೆತಿದೆ. ಗದಗವರೆಗೂ ತಲುಪಬಹುದೆಂಬ ಭರವಸೆಯೊಂದಿಗೆ ರೈಲನ್ನು ಚಾಲಕ ಓಡಿಸಿದ್ದಾನೆ. ತಳಕಲ್ ಬಿಟ್ಟು ಸ್ವಲ್ಪ ದೂರ ಕ್ರಮಿಸಿ ಕಣಗಿನಹಾಳ ಬಳಿ ರೈಲು ನಿಂತಿತೆಂದು ಮೂಲಗಳೂ ತಿಳಿಸಿವೆ.

ರೈಲು ತಾಂತ್ರಿಕ ದೋಷದಿಂದ ನಿಂತಿದ್ದರಿಂದ ಗದಗ, ಬಾಲಕೋಟೆ, ವಿಜಯಪುರ ತಲುಪಬೇಕಿದ್ದ ಪ್ರಯಾಣಿಕರು ಅತ್ತ ಊರು ತಲುಪದೇ ಇತ್ತ ತಿನ್ನಲು ಏನೂ ದೊರೆಯದೇ ಪರಿತಪಿಸಿದರು.

ಗದಗವರೆಗೆ ಸಂಚರಿಸಬೇಕಾಗಿದ್ದ ಕೆಲ ಪ್ರಯಾಣಿಕರು ತಮ್ಮ ಮನೆಗೆ ದೂರವಾಣಿ ಮೂಲಕ ಸಂಪರ್ಕಿಸಿ ದ್ವಿಚಕ್ರ ವಾಹನ, ಕಾರಿನ ಮೂಲಕ ತೆರಳಿದರು.

ಸುಮಾರು ಎರಡು ಗಂಟೆಗಳ ನಂತರ ಗದಗನಿಂದ ಪ್ರತ್ಯೇಕ ಇಂಜಿನ್ ತರಿಸಿ ರೈಲು ಸಂಚಾರಕ್ಕೆ ಅನುಕೂಲ ಮಾಡಿ ಕೊಡಲಾಯಿತು. ತಾಂತ್ರಿಕ ದೋಷದಿಂದ ರೈಲು ನಿಂತಿದ್ದರಿಂದ ಹಂಪಿ, ಅಮರಾವತಿ ಎಕ್ಸ್‌ಪ್ರೆಸ್ ರೈಲುಗಳು ಸುಮಾರು ಎರಡು ಗಂಟೆ ವಿಳಂಬವಾಗಿ ಸಂಚರಿಸಿವೆಯೆಂದು ಮೂಲಗಳು ತಿಳಿಸಿವೆ.

## ವಿವಿಧ ಸರ್ಕಾರಿ ಕಚೇರಿಗಳ ಪ್ರಗತಿ ಪರಿಶೀಲನೆ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾ ಹಕ ಅಧಿಕಾರಿ ಭುವನೇಶ ಪಾಟೀಲ ಅವರು ಕಲಘಟಗಿ ತಾಲೂಕಿನ ಮುಕ್ಕಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಮೂಲ ಸೌಕರ್ಯಗಳ ಬಗ್ಗೆ ಹಾಗೂ ಸ್ವಚ್ಛತೆಯ ಬಗ್ಗೆ ಪರಿವೀಕ್ಷಣೆ ಮಾಡಿ ಸಿಬ್ಬಂದಿಗಳೊಂದಿಗೆ ಸಂವಾದ ನಡೆಸಿದರು.

ಕಲಘಟಗಿ ಪಟ್ಟಣದಲ್ಲಿರುವ ಅಕ್ಕ ಕೆಫೆಗೆ ಭೇಟಿ ನೀಡಿ, ಅಕ್ಕ ಕೆಫೆಯಲ್ಲಿ ತಯಾರಿಸುವ ಆಹಾರ, ಸ್ವಚ್ಛತೆ, ನೈರ್ಮಲ್ಯ ಕುರಿತು ಸಿಬ್ಬಂದಿಗಳೊಂದಿಗೆ ಸಂವಾದವನ್ನು ನಡೆಸಿದರು. ಸ್ವಚ್ಛತೆ ಹಾಗೂ ತಯಾರಿಸುವ ಆಹಾರ ಪದಾರ್ಥಗಳ




ಕುರಿತು ಮಾಹಿತಿಯನ್ನು ಪಡೆದುಕೊಂಡರು.

ನಂತರ ಅವರು ಮುಕ್ಕಲ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಅರಿವು ಕೇಂದ್ರ (ಡಿಜಿಟಲ್ ಲೈಬ್ರರಿ) ಪರಿಶೀಲಿಸಿ, ಬೇಸಿಗೆ ಬೇಸುಗೆ ಕಾರ್ಯಕ್ರಮಗಳ ವೇಳಾ ಪಟ್ಟಿಯಂತೆ ಹಮ್ಮಿಕೊಂಡಿರುವ ಕಾರ್ಯಕ್ರಮ ಕುರಿತು ಮಕ್ಕಳೊಂದಿಗೆ ಸಂವಾದ ನಡೆಸಿ, ಮಕ್ಕಳ ಕಾರ್ಯಕ್ರಮಗಳಾದ ಏಕಪಾತ್ರಾಭಿನಯ, ಕಿರು ಚಿತ್ರ, ನಾಟಕ ಹಾಗೂ ನೃತ್ಯಗಳನ್ನು ವೀಕ್ಷಿಸಿದರು.

ಮಧ್ಯಾಹ್ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಕಲಘಟಗಿ ತಾಲೂಕು ಪಂಚಾಯತ ಸಭಾಭವನದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆ ಹಾಗೂ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಸಾವಂತ ಹಾಗೂ ಸಹಾಯಕ ನಿರ್ದೇಶಕ (ಗ್ರಾ.ಉ) ಗಿರೀಶ ಕೋರಿ, ಸಹಾಯಕ ನಿರ್ದೇಶಕಿ (ಪಂ.ರಾ) ಸುಮಾ ನಾರಾಯಣ ಮತ್ತು ತಾಲೂಕಿನ ಎಲ್ಲಾ ಇಲಾಖಾ ಅನುಷ್ಠಾನ ಅಧಿಕಾರಗಳು ಹಾಗೂ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ನರೇಗಾ ಸಿಬ್ಬಂದಿಗಳು ಭಾಗವಹಿಸಿದ್ದರು.

## ಮಸಣವಾಟ ಜಮೀನು : ಆಕ್ಷೇಪಣೆ ಸಲ್ಲಿಕೆ

ಬಾಗಲಕೋಟೆ: ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಬನಹಟ್ಟಿ ಗ್ರಾಮದ ಸ.ನಂ.12/1ರಲ್ಲಿನ 11.14 ಎಕರೆ ವಿಸ್ತೀರ್ಣ ಪೈಕಿ 3.25 ಎಕರೆ ಸಾರ್ವಜನಿಕರ ಉಪಯೋಗಕ್ಕೆ ಸಗತ್ಯವಿಲ್ಲವೆಂದು ಮತ್ತು ಸಾರ್ವಜನಿಕ ಮಸಣವಾಟ ಜಮೀನಿನ ಭಾಗದಲ್ಲಿ ಸಾರ್ವಜನಿಕರು ಹಾಗೂ ಎಲ್ಲ ವ್ಯಕ್ತಿಗಳ ಹಕ್ಕುಳು ಕೊನೆಗೊಳ್ಳತಕ್ಕದ್ದೆಂದು ಜಿಲ್ಲಾಧಿಕಾರಿಗಳು 94ನೇ ನಿಯಮದ 68(1)ನೇ ಪ್ರಕರಣದ ಮೇರೆಗೆ ಘೋಷಿಸಿದ್ದಾರೆ.

ಇದರ ಮೇಲೆ ಆಕ್ಷೇಪಣೆಗಳು ಇದ್ದಲ್ಲಿ ಅಧಿಸೂಚನೆ ಹೊರಡಿಸಿದ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹರಿಗೆ ತಲುಪಿಸುವಲ್ಲಿ ವಿಳಂಬವಾಗಬಾರದು: ಬಿ.ಬಿ.ಅಸೂಟಿ



**ಬೆಳಗಾವಿ ವಾರ್ತೆ ಗದಗ :** ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗೆ ತಲುಪಿಸುವಲ್ಲಿ ವಿನಾಕಾರಣ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು ಯೋಜನೆಗಳ ಅನುಷ್ಠಾನಕ್ಕಾಗಿ ಸಂಬಂಧಿತ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಿ ಕೆಲಸ ನಿರ್ವಹಿಸಬೇಕು ಎಂದರು.

ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿನ ಬಸ್‌ನಿಲ್ದಾಣಗಳು ಸ್ವಚ್ಚವಾಗಿರುವಂತೆ ಕ್ರಮ ವಹಿಸಬೇಕು. ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ಗಮನ ಹರಿಸಬೇಕು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಶೀಘ್ರವಾಗಿ ತಲುಪುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ತಾಲೂಕು ಮಟ್ಟದ ಗ್ಯಾರಂಟಿ ಶಿಬಿರ/ಸಮಾವೇಶ : ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಇನ್ನೂ ಹೆಚ್ಚಿನ ಅರಿವು ಮೂಡಿಸುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಪ್ರತಿ ತಾಲೂಕುಗಳಲ್ಲಿಯೂ ಗ್ಯಾರಂಟಿ ಶಿಬಿರ/ಸಮಾವೇಶವನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ಬಿ.ಬಿ.ಅಸೂಟಿ ಅವರು ತಿಳಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನದ ಪ್ರಾಧಿಕಾರದ ಸದಸ್ಯರಾದ ಅಶೋಕ ಮಂದಾಲಿ ಮಾತನಾಡಿ ಗೃಹ ಲಕ್ಷಿ ??ೀ ಯೋಜನೆ ಸೌಲಭ್ಯದಿಂದ ಯಾವುದೇ ಫಲಾನುಭವಿ ವಂಚಿತರಾಗಬಾರದು. ಗೃಹಲಕ್ಷಿ ??ೀ ಯೋಜನೆಯ ಹಣ ಅರ್ಹ ಫಲಾನುಭವಿಗಳಿಗೆ ತಲುಪಿರುವ ಕುರಿತು ಸಮೀಕ್ಷೆ ಕಾರ್ಯ ನಡೆಸಬೇಕು. ಅನ್ನಭಾಗ್ಯ ಯೋಜನೆಯ ಸೌಲಭ್ಯ ಫಲಾನುಭವಿಗಳಿಗೆ ತಲಪುವಲ್ಲಿ ವಿಳಂಬವಾಗಬಾರದು. ಕೆಎಸ್‌ಆರ್‌ಟಿಸಿ ಎಲ್ಲ ಘಟಕಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಮುಖ್ಯಸ್ಥರು ಅವುಗಳ ಸಮರ್ಪಕ ಅನುಷ್ಠಾನದ ಕುರಿತು ಪರಾಮರ್ಶೆ ನಡೆಸಬೇಕು. ಅರ್ಹರಿಗೆ ಯೋಜನೆಗಳ ಸೌಲಭ್ಯ ನಿಗದಿತ ಅವಧಿಯೊಳಗೆ ಲಭ್ಯವಾಗುವಂತೆ ಕ್ರಮ ವಹಿಸಲು ಸೂಚಿಸಿದ ಅವರು ಸರ್ಕಾರದ ಸೌಲಭ್ಯಗಳ ಮೂಲಕ ಜನಸಾಮಾನ್ಯರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಬೇಕು ಎಂದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದೀಪಕ ಲಮಾಣಿ ಮಾತನಾಡಿ ಶಕ್ತಿ ಯೋಜನೆ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಪ್ರಯಾಣಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಪ್ರಯಾಣಿಸಲು ಕ್ರಮ ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಹೆಸ್ಕಾಂನಿಂದ ವಿದ್ಯುತ್ ಕಂಬಗಳ ಅಳವಡಿಕೆ, ಬಸ್ ನಿಲ್ದಾಣಗಳಲ್ಲಿ ಸಿಸಿ ಕ್ಯಾಮರಾ ಅಳವಡಿಕೆ ಕುರಿತು ಚರ್ಚಿಸಲಾಯಿತು.

ಪಂಚ ಗ್ಯಾರಂಟಿ ಯೋಜನೆಗಳ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು.

ಗೃಹ ಲಕ್ಷೀ ಯೋಜನೆಯಡಿ ಫೆಬ್ರುವರಿ 2026 ರ ಅಂತ್ಯದವರೆಗೆ 2,61,860 ನೊಂದಣಿಯಾದ ಅರ್ಜಿಗಳ ಪೈಕಿ 2,52,843 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ವಾಕರಸಾಸಂಸ್ಥೆಯಿಂದ ಯೋಜನೆ ಆರಂಭವಾದಾಗಿನಿಂದ 1-6-2023 ರಿಂದ 3-5-2023 ರವರೆಗೆ 155732562 ಪ್ರಯಾಣಿಕರು ಪ್ರಯಾಣಿಸಿದ್ದಾರೆ. 528,54,13,230 ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಹೆಚ್ಚುವರಿ 5 ಕೆ ಜಿ ಅಕ್ಕಿ ಆಹಾರ ಧಾನ್ಯಗಳ ಹಂಚಿಕೆ ಯಡಿ ಫೆಬ್ರುವರಿ 2025 ರಿಂದ ಏಪ್ರಿಲ್ 2026 ರವರೆಗೆ 5,81,566,81 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಯುವನಿಧಿ ಯೋಜನೆಯಡಿ ಯೋಜನೆ ಆರಂಭದಿಂದ ಜನವರಿ 2024 ರಿಂದ ಮೇ 2026 ರವರೆಗೆ 8075 ಅರ್ಜಿ ಸ್ವೀಕೃತವಾಗಿರುತ್ತವೆ. ಅದರಲ್ಲಿ 6712 ಅರ್ಹ ಫಲಾನುಭವಿಗಳಿಗೆ 19,72,45,500/- ರೂ. ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ.

ಗೃಹ ಜ್ಯೋತಿ ಯೋಜನೆಯಡಿ ಯೋಜನೆ ಆರಂಭದಿಂದ ಏಪ್ರಿಲ್ 2026 ರವರೆಗೆ 274543 ಸ್ಥಾವರಗಳು ನೋಂದಣಿಯಾಗಿದ್ದು ಶೇ 98.51 ಪ್ರಗತಿಯಾಗಿದೆ.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಉಪಾಧ್ಯಕ್ಷರುಗಳಾದ ಹೇಮಂತಗೌಡ ಪಾಟೀಲ, ಪಿ.ಬಿ. ಅಳಗವಾಡಿ, ಫಕ್ರುಸಾಬ ಚಿಕ್ಕಮಣ್ಣೂರ, ಸದಸ್ಯರುಗಳಾದ ಸಂಗನಗೌಡ ಪಾಟೀಲ, ಷರೀಫ್ ಬಿಳಿಎಲಿ, ವಿವೇಕ ಯಾವಗಲ್, ದೇವಪ್ಪ ಮುರ್ನಾಳ, ಪುಲಕೇಶಗೌಡ ಪಾಟೀಲ, ಶರಣಪ್ಪ ಬೆಟಗೇರಿ, ಈಶಣ್ಣ ಹುನಸೀಕಟ್ಟಿ, ವೀರಯ್ಯ ಮಠಪತಿ, ಆರ್.ಆರ್. ಗಡ್ಡದೇವರಮಠ, ಜಿ.ಪಂ. ಯೋಜನಾ ನಿರ್ದೇಶಕ ಚಳಗೇರಿ ಸೇರಿದಂತೆ ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ -2 : ಪೂರ್ವಭಾವಿ ಸಭೆ ಪರೀಕ್ಷೆ ವ್ಯವಸ್ಥಿತವಾಗಿ ನಡೆಸಲು ಕ್ರಮ ವಹಿಸಿ



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಮೇ 18 ರಿಂದ 25 ರವರೆಗೆ ಜರುಗುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಯನ್ನು ವ್ಯವಸ್ಥಿತವಾಗಿ ಅಚ್ಚುಕಟ್ಟಾಗಿ ನಡೆಸಲು ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಒಟ್ಟು 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪ ದೋಷಗಳಾಗದಂತೆ ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ ಬಂದೋಬಸ್ತ, ಪರೀಕ್ಷೆಗಳನ್ನು ಪಾರದರ್ಶಕವಾಗಿ ಹಾಗೂ ಸುಗಮವಾಗಿ ಜರುಗಿಸುವ ಕುರಿತು ಸೂಕ್ತ ವ್ಯವಸ್ಥೆ ಕೈಗೊಳ್ಳುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಜಿಲ್ಲಾ ನೋಡಲ್ ಅಧಿಕಾರಿ ಎಚ್.ಬಿ.ರಡ್ಡೇರ್ , ಡಿವೈಪಿಸಿ ಎಂ.ಎಸ್.ಕಂಬಳಿ, ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಜರಿದ್ದರು.

ಎಸ್ ಎಸ್ ಎಲ್ ಸಿ ಪರೀಕ್ಷೆ-2 ಮೇ 18 ರಿಂದ 25 ರವರೆಗೆ ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು ಒಟ್ಟು 1905 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

**ಎಸ್‌ಎಸ್‌ಎಲ್‌ಸಿ ಪರೀಕ್ಷೆ- 2 ರ ವೇಳಾಪಟ್ಟಿ:**

ಮೇ 18 ರಂದು ಬೆಳಿಗ್ಗೆ 10 ಗಂಟೆಯಿಂದ ಮ.1.15 ರವರೆಗೆ ಪ್ರಥಮ ಭಾಷೆ -ಕನ್ನಡ, ತೆಲುಗು, ಹಿಂದಿ, ಮರಾಠಿ, ತಮಿಳು, ಉರ್ದು, ಇಂಗ್ಲೀಷ್ , ಇಂಗ್ಲೀಷ್ ( ಎನ್ ಸಿ ಇ ಆರ್ ಟಿ) ಸಂಸ್ಕೃತ ; ಮೇ 19 ರಂದು ಬೆ 10. ಗಂಟೆಯಿಂದ ಮ. 1.15 ರವರೆಗೆ ಕೋರ್ ಸಬ್ಜೆಕ್ಟ್ -ವಿಜ್ಞಾನ , ರಾಜ್ಯಶಾಸ್ತ್ರ, ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ ; ಮೇ 20 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ದ್ವಿತೀಯ ಭಾಷೆ ಇಂಗ್ಲೀಷ್, ಕನ್ನಡ ; ಮೇ 21 ರಂದು ಬೆ.10 ಗಂಟೆಯಿಂದ ಮ.1.00 ಗಂಟೆಯವರೆಗೆ ಕೋರ್ ಸಬ್ಜೆಕ್ಟ್ ; ಗಣಿತ, ಸಮಾಜ ಶಾಸ್ತ್ರ; ಮೇ 22 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ತೃತೀಯ ಭಾಷೆ – ಹಿಂದಿ( ಎನ್ ಸಿ ಇ ಆರ್ ಟಿ), ಕನ್ನಡ, ಇಂಗ್ಲೀಷ್ , ಅರೇಬಿಕ್ , ಉರ್ದು, ಸಂಸ್ಕೃತ, ಕೊಂಕಣಿ, ತುಳು, ಮರಾಠಿ; ಬೆಳಿಗ್ಗೆ 10 ರಿಂದ ಮ. 12.15 ರವರೆಗೆ ಎನ್.ಎಸ್.ಕ್ಯೂ ಎಫ್ ವಿಷಯಗಳು – ಮಾಹಿತಿ ತಂತ್ರಜ್ಞಾನ, ರಿಟೇಲ್ , ಅಟೋಮೊಬೈಲ್, ಬ್ಯೂಟಿ ಆಂಡ್ ವೆಲ್‌ನೆಸ್, ಅಪರೆಲ್ ಮೇಡ್ ಅಪ್ಸ್ & ಹೋಮ್ ಫರ್ನಿಷಿಂಗ್ , ಎಲೆಕ್ಟ್ರಾನಿಕ್ಸ್ & ಹಾರ್ಡವೇರ್, ಮೇ 23 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ಕೋರ್ ಸಬ್ಜೆಕ್ಟ್ -ಸಮಾಜ ವಿಜ್ಞಾನ; ಮೇ 25 ರಂದು 10 ರಿಂದ ಮ. 1.15 ಗಂಟೆಯವರೆಗೆ ಜೆ.ಟಿ.ಎಸ್.ವಿಷಯಗಳು: ಎಲಿಮೆಂಟ್ಸ್ ಆಫ್ ಎಲೆಕ್ಟ್ರಿಕಲ್ ಇಂಜನೀಯರಿಂಗ್ – ಖಗಿ, ಎಲಿಮೆಂಟ್ಸ್ ಆಫ್ ಮೆಕ್ಯಾನಿಕಲ್ ಇಂಜನೀಯರಿಂಗ್ ಖಗಿ, ಎಲಿಮೆಂಟ್ಸ್ ಆಫ್ ಎಲೆಕ್ಟ್ರಾನಿಕ್ಸ್ ಇಂಜನೀಯರಿಂಗ್ – ಖಗಿ, ಪ್ರೋಗ್ರಾಮಿಂಗ್ ಇನ್ ಂಖಖ 'ಅ' ', ಅರ್ಥಶಾಸ್ತ್ರ .

## ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಅಣುಕು ಪ್ರದರ್ಶನ



**ಬೆಳಗಾವಿ ವಾರ್ತೆ ವಿಜಯಪುರ:** ಬಿ.ಎಲ್.ಡಿ.ಇ ಆಸ್ಪತ್ರೆ ಆವರಣದಲ್ಲಿ ಅಗ್ನಿ ಶಾಮಕ ಇಲಾಖೆ, ಗೃಹ ರಕ್ಷದ ದಳ, ಬಿ.ಎಲ್.ಡಿ.ಇ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆಯ ವೈದ್ಯಕೀಯ ತಂಡ ಮತ್ತು ಎನ್.ಎನ್.ಸಿ ಘಟಕಗಳಿಂದ (ಏರ್ ರೈಡ್) ಬಾಂಬ್ ಬ್ಲಾಸ್ಟ ಸಂದರ್ಭದಲ್ಲಿ ತೆಗೆದುಕೊಳ್ಳಬಹುದಾದ ಮುನ್ನೆಚ್ಚರಿಕೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಇಂದು ಅಣುಕು ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಬಾಂಬ್ ಬ್ಲಾಸ್ಟ್ ಆದ ಸಮಯದಲ್ಲಿ ಕೈಗೊಳ್ಳಬೇಕಾದ ಪ್ರಾಥಮಿಕ ಉಪಚಾರಗಳ ಕುರಿತು ಅಣುಕು ಪ್ರದರ್ಶನ ಮುಖಾಂತರ ಒಳಗೆ ಸಿಲುಕೊಂಡಿರುವ ಸಾರ್ವಜನಿಕರನ್ನು ತುರ್ತಾಗಿ ರಕ್ಷಿಸಲು ಕ್ರಮ ವಹಿಸುವುದು ಜೊತೆಗೆ ಕಪ್ಪು ಬಣ್ಣದ ಗುರುತು ಮರಣ ಹೊಂದಿದವರೆಂದು ಗುರುತಿಸಲಾಗುವುದು.ಕೆಂಪು ತೀವ್ರತರವಾಗಿ ಗಾಯಗೊಂಡಿವರೆಂದು, ಹಳದಿ ಬಣ್ಣ ಕಡಿಮೆ ಗಾಯಗೊಂಡವರೆಂದು ಹಾಗೂ ಹಸಿರು ಬಣ್ಣ ಅಪಾಯದಿಂದ ಪಾರಾದವರೆಂದು ಪರಿಗಣಿಸುವಂತೆ ಇಲ್ಲಿ ನಡೆದ ಅಣುಕು ಪ್ರದರ್ಶನ ಯಶಸ್ವಿಯಾಗಿ ನಡೆಸಿಕೊಡಲಾಯಿತು.

ಅದರೊಂದಿಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ಘಟನೆ ಸಂಭವಿಸಿದ ಸಂದರ್ಭದಲ್ಲಿ ಸಾರ್ವಜನಿಕರು ಕೂಡ ಮುನ್ನೆಚ್ಚರಿಕೆ ಕ್ರಮ ವಹಿಸಬಹುದಾಗಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲ ಇಲಾಖೆ ಅಧಿಕಾರಿಗಳು, ಬಿ.ಎಲ್.ಡಿ.ಇ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿಗಳು ಅಣುಕು ಪ್ರದರ್ಶನ ಕಾರ್ಯಕ್ರಮ ಯಶಸ್ವಿಯಾಗಿ ನಡೆಸಿಕೊಟ್ಟರು. ಈ ಅಣುಕು ಪ್ರದರ್ಶನದಲ್ಲಿ ಜಿಲ್ಲಾ ಅಗ್ನಿ ಶಾಮಕ ಅಧಿಕಾರಿಗಳಾದ ಶಶಿಧರ ನೀಲಗರ್,ಅಗ್ನಿ ಶಾಮಕ ಠಾಣಾಧಿಕಾರಿ ಉಮೇಶ ತಳಕೇರಿ, ಸಹಾಯಕ ಅಗ್ನಿ ಶಾಮಕ ಠಾಣಾಧಿಕಾರಿ ಅಶೋಕ ಜಡ್ಡೆನ್ನವರ, ಅಶೋಕ ರಾಠೋಡ, ಗೃಹ ರಕ್ಷದ ಕಮಾಡೆಂಟ್ ಶಿವಾನಂದ ಶಿವೂರ, ಡೆಪ್ಯೂಟಿ ಕಮಾಡೆಂಟ್ ಮಹಾದೇವ ಪೂಜಾರ, ಬಿ.ಎಲ್.ಡಿ.ಇ ಡೀಮ್ಡ್ ಯುನಿವರ್ಸಿಟಿಯ ಡೀನ್ ಮತ್ತು ಪ್ರಾಚಾರ್ಯರಾದ ಡಾ. ತೇಜಸ್ವಿನಿ ವಲ್ಲಭ, ಉಪ ಪ್ರಾಚಾರ್ಯರಾದ ಡಾ.ವಿಜಯಕುಮಾರ ಟಿ.ಕೆ, ಡಾ. ಆನಂದ ಅಂಬಲಿ, ಡಾ.ಎನ್.ಎಸ್ ಬೆಂತೂರ, ಡಾ. ರವಿಕುಮಾರ ಬಿರಾದಾರ,ಡಾ. ಐ.ಎಸ್. ಧಾರವಾಡಕರ, ಡಾ.ಎಸ್.ಎಸ್ ಕಟ್ಟಿ, ಡಾ. ವಿನೋದ ಜಾಧವ, ಶಾಂತೇಶ ಸಲಗರೆ, ಶಶಿಕಲಾ ತೇರದಾಳ, ಮಂಗಲಾ ಕೋಳಿ, ಜಯಂತಿ ಆರ್, ಚೇತನ ಜೋರಾಪುರ, ಸುಧಾರಕರ ಸಮಗೊಂಡ, ಪ್ರಕಾಶ ಜಕ್ಕೊಂಡಿ, ಅಶ್ವತಾ ಕೆ, ಮಲ್ಲಿಕಾರ್ಜುನ ಮೇತ್ರಿ, ವಿಶ್ವನಾಥ ಬಿರಾದಾರ, ಆನಂದ ಪಾಟೀಲ, ಏಕನಾಥ ಜಾಧವ, ರಾಕೇಶ ಜೈನಾಪುರ, ಅಗ್ನಿ ಶಾಮಕ , ಗೃಹ ರಕ್ಷಕ, ಬಿ.ಎಲ್.ಡಿ.ಇ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆಯ ವೈದ್ಯಕೀಯ ತಂಡ ಸಿಬ್ಬಂದಿಗಳು ಮತ್ತು ಎನ್.ಎನ್.ಸಿ ಘಟಕದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ನಾಗರಬೆಟ್ಟ ಏತ ನೀರಾವರಿ ಯೋಜನೆ ಶೀಘ್ರ ಲೋಕಾರ್ಪಣೆ; ಶಾಸಕ ನಾಡಗೌಡ ಬರವಸೆ

# ಮಾಜಿ ಶಾಸಕರ ಅಕ್ರಮ ನಿರಂತರ ಜ್ಯೋತಿ ವಿದ್ಯುತ್ ಅಕ್ರಮ ಬಯಲು

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದ್ದ ಚಿಮ್ಮಲಗಿ ಏತ ನೀರಾವರಿ ಹಾಗೂ ಎಎಲ್‌ಬಿಸಿ ಕಾಲುವೆಗಳಿಗೆ ಮುಂದಿನ ಒಂದು ವಾರ ದೊಳಗೆ ನೀರು ಬಿಡಲಾಗುವುದು ಎಂದು ಕೆಎಸ್ಡಿಎಲ್ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್. ನಾಡಗೌಡ ಹೇಳಿದರು.

ಶುಕ್ರವಾರ ಪಟ್ಟಣದ ಹುಡ್ಕೋ ಬಡಾವಣೆಯ ತಮ್ಮ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬ್ಯಾಲ್ಯಾಳ ಸಮೀಪ ಬಿರುಗಾಳಿಗೆ ಸಿಲುಕಿ ವಿದ್ಯುತ್ ಟವರ್ ಬಿದ್ದಿದ್ದರಿಂದ ನೀರು ಹರಿಸಲು ಅಡಚಣೆಯಾಗಿತ್ತು. ಈ ಕುರಿತು ಕೆಪಿಟಿಸಿಎಲ್ ಹಾಗೂ ಹೆಸ್ಕಾಂ ಉನ್ನತ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಸೋಮ ವಾರದೊಳಗೆ ದುರಸ್ತಿ ಕಾರ್ಯ ಪೂರ್ಣ ಗೊಳ್ಳಲಿದೆ. ನಂತರ ಕೆಬಿಜೆಎನ್‌ಎಲ್ ಅಧಿಕಾರಿಗಳು ಕಾಲುವೆಗಳಿಗೆ ನೀರು ಹರಿಸಲಿದ್ದಾರೆ ಎಂದು ಭರವಸೆ ನೀಡಿದರು.

**ನಾಗರಬೆಟ್ಟ ಯೋಜನೆ ಶೀಘ್ರ ಲೋಕಾರ್ಪಣೆ:** ಇದೇ ವೇಳೆ ತಾಲೂಕಿನ ಪ್ರಮುಖ ಯೋಜನೆಯಾದ ನಾಗರಬೆಟ್ಟ ಏತ ನೀರಾವರಿ ಯೋಜನೆಯ ಬಗ್ಗೆ ಮಾಹಿತಿ ನೀಡಿದ ಶಾಸಕರು, "ಈ ಯೋಜನೆಯ ಕಾಮಗಾರಿಗಳು ಈಗಾಗಲೆ ಬಹುತೇಕ ಮುಕ್ತಾಯಗೊಂಡಿವೆ. ಕೇವಲ ಒಬ್ಬರು ಹೊಲದ ಮಾಲೀಕರ ಸಮಸ್ಯೆ ಯಿತ್ತು, ಅದನ್ನು ಕೂಡ ಮಾತುಕತೆಯ ಮೂಲಕ ಬಗೆಹರಿಸಲಾಗಿದೆ. ಶೀಘ್ರದಲ್ಲಿ ಯೇ ಈ ಯೋಜನೆಯನ್ನು ಲೋಕಾರ್ಪ ಣೆಗೊಳಿಸಿ ರೈತರ ಜಮೀನಿಗೆ ನೀರು ತಲುಪಿಸಲಾಗುವುದು," ಎಂದು ವಿಶ್ವಾಸ ವ್ಯಕ್ತಪಡಿಸಿದರು. **ಕೆರೆ ತುಂಬಿಸುವ ಯೋಜನೆ:** ಸುಮಾರು 1.9 ಟಿಎಮ್‌ಸಿ ನೀರಿನ ಮೂಲಕ ಮುದ್ದೇಬಿಹಾಳ ಹಾಗೂ ತಾಳಿಕೋಟಿ ವ್ಯಾಪ್ತಿಯ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಲಾಗಿದೆ. ಬೆಳೆದು ನಿಂತ ಬೆಳೆಗಳು ಒಣಗದಂತೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ಕೃಷ್ಣಾ ಮೇಲ್ದಂಡೆ ಯೋಜನೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇನೆ ಎಂದರು. ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಿಸುವ ವಿಷಯದಲ್ಲಿ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು.



**ಮಾಜಿ ಶಾಸಕರ ಅಕ್ರಮ ವಿದ್ಯುತ್ ಬಳಕೆ:** ಕ್ಷೇತ್ರದ ಮಾಜಿ ಶಾಸಕರೊಬ್ಬರು ನಿಯಮ ಬಾಹಿರವಾಗಿ ಸೊಗಲದಂಡಿ ಬಳಿಯಿರುವ ತಮ್ಮ ಜಮೀನಿಗೆ ಕಳೆದ ಆರು ವರ್ಷಗಳಿಂದ 'ನಿರಂತರ ಜ್ಯೋತಿ' ವಿದ್ಯುತ್ ಬಳಸುತ್ತಿದ್ದಾರೆ. ರೈತರು ಟಿಸಿಗಳಿಗಾಗಿ ಪರದಾಡುತ್ತಿರುವಾಗ ಮಾಜಿ ಶಾಸಕರ ಈ ಅಕ್ರಮ ಬೆಳಕಿಗೆ ಬಂದಿದೆ. ಕೇವಲ ಊರುಗಳಿಗೆ ನೀಡಬೇಕಾದ ಸೌಲಭ್ಯ ವನ್ನು ವೈಯಕ್ತಿಕ ಲಾಭಕ್ಕೆ ಬಳಸಿಕೊಂ ಡಿರುವ ಬಗ್ಗೆ ಮೇಲಾಧಿಕಾರಿಗಳಿಗೆ ದೂರು ನೀಡಲಾಗಿದ್ದು, ಕೂಡಲೇ ಕ್ರಮ ಕೈಗೊಳ್ಳಲು ಸೂಚಿಸಿದ್ದೇನೆ ಎಂದು ಪರೋಕ್ಷವಾಗಿ ಮಾಜಿ ಶಾಸಕ ವಿರುದ್ಧ ಹರಿಹಾಯ್ದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡ ಪಿಂಟು ಸಾಲಿಮನಿ ಉಪಸ್ಥಿತರಿದ್ದರು.

# ಕೃಷಿ ಪರಿಕರಗಳ ಗುಣಮಟ್ಟ ನಿಯಂತ್ರಣ ನಿಯಮಗಳು ಹಾಗೂ ಮಾರ್ಗಸೂಚಿಗಳ ಕುರಿತು ಕಾರ್ಯಾಗಾರ

**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಇಪ್ಕೋ ,ಗದಗ ಇವರ ಸಂಯುಕ್ತಾಶ್ರಯದಲ್ಲಿ ಕೃಷಿ ಪರಿಕರಗಳ ಗುಣಮಟ್ಟ ನಿಯಂತ್ರಣ ನಿಯಮಗಳು ಹಾಗೂ ಮಾರ್ಗಸೂಚಿಗಳ ಕುರಿತು ಒಂದು ದಿನದ ಕಾರ್ಯಾಗಾರವನ್ನು ಶುಕ್ರವಾರ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಗದಗ ಇಲ್ಲಿ ಆಯೊಜಿಸಲಾಗಿತ್ತು.

ಕೃಷಿ ಮತ್ತು ಸಂಬಂಧಿತ ಕಾನೂನುಗಳ ಕೇಂದ್ರದ ನಿರ್ದೇಶಕರಾದ ವೆಂಕಟರವಣಪ್ಪ ಅವರು ಕೃಷಿ ಪರಿಕರಗಳ ಗುಣಮಟ್ಟ ಕಾಪಾಡುವ ಮಹತ್ವ ಪರವಾನಿಗೆ ನಿಯಮಗಳು, ದಾಖಲೆ ನಿರ್ವಹಣೆ , ಕೃಷಿ ಪರಿಕರಗಳ ಸಂಗ್ರಹ ವಿಧಾನಗಳು, ಮಾರಾಟ ನಿಯಮಗಳು ಹಾಗೂ ಸರ್ಕಾರದ ವಿವಿಧ ಕಾಯ್ದೆ ಮತ್ತು ನಿಯಮಾವಳಿಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ಬೀಜ ಅಧಿನಿಯಮ, ರಸಗೊಬ್ಬರ ನಿಯಂತ್ರಣ ಆದೇಶ ( ಎಫ್ ಸಿ ಓ) , ಕೀಟನಾಶಕ ಅಧಿನಿಯಮ ಹಾಗೂ ಇತರ ಸಂಬಂಧಿತ ನಿಯಮಗಳ ಕುರಿತು ಮಾಹಿತಿ ನೀಡಿದರು. ಕೃಷಿ ಪರಿಕರಗಳ ಮಾದರಿ ಸಂಗ್ರಹ, ಲೇಬಲ್ ನಿಯಮಗಳು, ಬಿಲ್ ನೀಡುವ ಕಡ್ಡಾಯತೆ ಹಾಗೂ ರೈತರಿಗೆ ಸರಿಯಾದ ಮಾರ್ಗದರ್ಶನ ನೀಡುವ ಬಗ್ಗೆ ವಿತರಕರಿಗೆ ಸಲಹೆ ನೀಡಿದರು.

ಇಫ್ಕೋ ಕ್ಷೇತ್ರ ಅಧಿಕಾರಿ ರಾಘವೇಂದ್ರ ಎನ್ ಇವರು ಇಫ್ಕೋ ಉತ್ಪನ್ನಗಳ ಕುರಿತು ಶ್ರವಣ ದೃಶ್ಯ ಮಾಧ್ಯಮದ ಮೂಲಕ ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಸಹಾಯಕ ನಿರ್ದೇಶಕರು ( ತರಬೇತಿ) ಡಾ.ಅಬ್ದುಲ್ ಅಜೀಜ್ ಮುಲ್ಲಾ ಭಾಗವಹಿಸಿದ್ದರು.

ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಅವರು ಮಾತನಾಡಿ ಜಿಲ್ಲೆಯ ವಿವಿಧ ತಾಲೂಕುಗಳ ಕೃಷಿ ಪರಿಕರ ವಿತರಕರು ಹಾಗೂ ಕೃಷಿ ಇಲಾಖೆಯು ರೈತರಿಗೆ ಗುಣಮಟ್ಟದ ಪರಿಕರಗಳನ್ನು ಪೂರೈಸಲು ಜೊತೆಗೂಡಿ ಕೆಲಸ ಮಾಡೋಣ ಎಂದರು.



ಇದೇ ಸಂದರ್ಭದಲ್ಲಿ ಯೂರಿಯಾ ವಿತರಣೆಗಾಗಿ ನವೀಕರಿಸಿದ ಕೆ.-ಕಿಸಾನ್ ತಂತ್ರಾಂಶದ ಬಳಕೆ ಕುರಿತು ಕೃಷಿ ಅಧಿಕಾರಿ ಶ್ರೀಮತಿ ಚಿತ್ರಾ ತರಬೇತಿ ನೀಡಿದರು ಹಾಗೂ ಮಾರಾಟಗಾರರಿಂದ ತಂತ್ರಾಂಶದ ಬಳಕೆ ಕುರಿತು ಬಂದ ಪ್ರಶ್ನೆಗಳಿಗೆ ಪರಿಹಾರೋಪಾಯಗಳನ್ನು ನೀಡಲಾಯಿತು. ಜಿಲ್ಲೆಯ ವಿವಿಧ ತಾಲೂಕುಗಳ 300 ಕೃಷಿ ಪರಿಕರ ವಿತರಕರು , ಕೃಷಿ ಅಧಿಕಾರಿಗಳು ಹಾಗೂ ಇಲಾಖೆಯ ಸಿಬ್ಬಂದಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಶ್ರೀಮತಿ ಸ್ಫೂರ್ತಿ ಜಿ.ಎಸ್. ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಂಡರಗಿ ಸಹಾಯಕ ಕೃಷಿ ನಿರ್ದೇಶಕರು ಕಾರ್ಯಕ್ರಮ ನಿರೂಪಿಸಿದರು.

# ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಪದಗ್ರಹಣ ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಹಾಗೂ ಕೃಷಿ ಸಚಿವರಿಗೆ ಮನವಿ ಮೂಲಕ ಬೇಡಿಕೆ ಈಡೇರಿಕೆಗೆ ಆಗ್ರಹ



**ಬೆಳಗಾವಿ ವಾರ್ತೆ ವಿಜಯಪುರ :** ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘಟನೆಯು ರಾಜ್ಯ ಸಮಿತಿಯು ಪದಾಧಿಕಾರಿಗಳ ನೇತೃತ್ವದಲ್ಲಿ ವಿಜಯಪುರ ಜಿಲ್ಲೆಯ ಸಮಸ್ತ ತಾಲೂಕಾಗಳ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ ಪ್ರಮಾಣ ವಚನ ಸ್ವೀಕಾರ ಸಮಾರಂಭವು ಬುಧವಾರದಂದು ವಿಜಯಪುರದ ಗಗನ ಮಹಲ ಗಾರ್ಡನನಲ್ಲಿ ನೆರವೇರಿತು.

ಈ ವೇಳೆ ಸುತ್ತ –ಮುತ್ತಲಿನ ಜಿಲ್ಲೆಗಳ ಹಲವಾರು ತಾಲೂಕಿನ ಬೆಳೆ ಸಮೀಕ್ಷೆದಾರ ಸಂಘಟನೆಯ ಪದಾಧಿಕಾರಿಗಳು ಕೂಡಾ ಭಾಗವಹಿಸಿದ್ದರು. ಸರಿಸುಮಾರು 60 ಜನ ಪದಾಧಿಕಾರಿಗಳಿಗೆಲ್ಲ ರಾಜ್ಯ ಅಧ್ಯಕ್ಷರಾದ ಭೀಮಪ್ಪ ಲಕ್ಷ್ಮಣ ತಳವಾರ ಅವರು ಪ್ರಮಾಣ ವಚನ ಬೋಧನೆಯನ್ನು ಸಂಸ್ಥಾಪಕರಾದ ನರಸಪ್ಪ ಅರ್ಜುನ್ ನಾವಿ ಅವರ ಸಮ್ಮುಖದಲ್ಲಿ ನೆರವೇರಿಸಿದರು.

ತದನಂತರ ವಿಜಯಪುರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿವರಾದ ಸೋಮಶೇಖರ ನಾಯ್ಕೋಡಿ ಅವರ ನೇತೃತ್ವದಲ್ಲಿ ಎಲ್ಲಾ ತಾಲೂಕಿನ ಹಾಗೂ ಜಿಲ್ಲಾ ಘಟಕದ ಪದಾಧಿಕಾರಿಗಳೊಡನೆ ಮಾನ್ಯ ಜಿಲ್ಲಾಧಿಕಾರಿಗಳಾದ ಡಾ.ಕೆ.ಆನಂದ ಅವರನ್ನು ಭೇಟಿ ನೀಡಿ ಅವರ ಮುಖಾಂತರ ಸಿದ್ಧರಾಮಯ್ಯ ಮಾನ್ಯ ಮುಖ್ಯಮಂತ್ರಿಗಳವರಿಗೆ ಮನವಿ ಸಲ್ಲಿಸಿ ಕೂಡಲೇ ನಮ್ಮ ಬೇಡಿಕೆ ಈಡೇರಿಸುವಂತೆ ಆಗ್ರಹ ಮಾಡಲಾಯಿತು.

ಇದೇವೇಳೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಅವರನ್ನು ಭೇಟಿ ಮಾಡಿ ಅವರ ಮುಖಾಂತರ ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರಿಗೂ ಮನವಿ ಸಲ್ಲಿಸುತ್ತಾ ಕರ್ನಾಟಕದ ಸಮಸ್ತ 23,720 ಜನ ಬೆಳೆ ಸಮೀಕ್ಷೆದಾರರಾದ ನಮ್ಮನ್ನೆಲ್ಲ ಕನಿಷ್ಠ ವೇತನದ ನೀತಿ ಇದರ ಅಡಿಯಲ್ಲಿ ದಿನಗೂಲಿ ಕಾರ್ಮಿಕರನ್ನಾಗಿ ನೇಮಕ ಮಾಡಿಕೊಂಡು ವರ್ಷ ಪೂರ್ತಿ ಕೆಲಸ ನೀಡಬೇಕೆಂದು ಮನವಿ ಪತ್ರವನ್ನು ಸಲ್ಲಿಸಿ ಮಾತನಾಡಿದರು . ಈ ವೇಳೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಬೆಳೆ ಸಮೀಕ್ಷೆದಾರರು ಹಾಗೂ ಎಲ್ಲಾ ತಾಲೂಕಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ದಸ್ತು ಬರಹಗಾರರಿಂದ ಪ್ರತಿಭಟನೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಧಾರವಾಡ ಜಿಲ್ಲಾ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ (ದಸ್ತು) ಪತ್ರ ಬರಹಗಾರರ ಟ್ರಸ್ಟ್ (ರಿ) ವತಿಯಿಂದ ನಗರದಲ್ಲಿಂದು ಪ್ರತಿಭಟನೆ ನಡೆಸಲಾಯಿತು.

ಸರ್ಕಾರವು ಪತ್ರ ಬರಹಗಾರರ ಹಿತರಕ್ಷಣೆ ಮಾಡದೇ ದಸ್ತು ಬರಹಗಾರರನ್ನು ನಿರುದ್ಯೋಗ ಮಾಡುವ ಪೇಪರಲೆಸ್ ನೋಂದಣಿ ವ್ಯವಸ್ಥೆಯನ್ನು ಕರ್ನಾಟಕ ರಾಜ್ಯದ ದಸ್ತು ಬರಹಗಾರ ಒಕ್ಕೂಟ ಹಾಗೂ ಧಾರವಾಡ ಜಿಲ್ಲೆಯ ಒಕ್ಕೂಟ ವಿರೋಧಿಸಿದೆ. ಡಿಜಿಟಲೀಕರಣಕ್ಕೆ ವಿರೋಧವಿಲ್ಲ, ಆದರೆ ಉದ್ಯೋಗ ನಷ್ಟ ಮಾಡಿ ತಮ್ಮನ್ನು ಬೀದಿಪಾಲು ಮಾಡುತ್ತಿದ್ದಾರೆ. ಇದಕ್ಕೆ ತಮ್ಮ ವಿರೋಧವಿದೆ ಎಂದು ದಸ್ತು ಬರಹಗಾರರು ಪೇಪರ್‌ಲೆಸ್ ನೋಂದಣಿ ವ್ಯವಸ್ಥೆಯ ವಿರುದ್ಧ ಪ್ರತಿಭಟನೆ ನಡೆಸಿ, ನ್ಯಾಯ ದೊರಕಿಸಿಕೊಡುವಂತೆ ಆಗ್ರಹಿಸಿ ಡಾ. ಅಂಬೇಡ್ಕರ ವೃತ್ತದಿಂದ ತಹಶೀಲ್ದಾರ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ಶಾಂತರಾಜ ಪಿ. ಪೋಳ, ಉಪಾಧ್ಯಕ್ಷರಾದ ವಿಜಯ ಆರ್. ಕುಲಕರ್ಣಿ, ಜಗದೀಶ ಎಸ್. ಚಿಕ್ಕಮಠ, ರಾಮಚಂದ್ರ ಎಸ್. ಸಾಳುಂಕೆ, ರಾಘವೇಂದ್ರ ಕೆ. ನರಗುಂದಕರ, ಪ್ರಧಾನ ಕಾರ್ಯದರ್ಶಿ ವಿನೋದಗೌಡ ಚ. ಪಾಟೀಲ, ಸಹಾಯಕ ಕಾರ್ಯದರ್ಶಿ ಶಂಕರ ಟಿ. ಹುಟಗಿ, ಗುರುರಾಜ ಎಮ್. ಕೊಟಬಾಗಿ ಮತ್ತಿತರರು ಉಪಸ್ಥಿತರಿದ್ದರು.

# ಯಶಸ್ಸಿಗೆ ಶಿಸ್ತು, ಸಮರ್ಪಣೆ, ದೂರದೃಷ್ಟಿ ಅತ್ಯವಶ್ಯ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಮೂರು ದಿನಗಳ ನಿರ್ವಹಣಾ ಉತ್ಸವ ಚಕ್ರವ್ಯೂಹ 2ಏ26 ಅನ್ನು ಸ್ವರ್ಣ ಗ್ರೂಪ್ ಹುಬ್ಬಳ್ಳಿಯ ಮುಖ್ಯಸ್ಥರಾದ ಡಾ. ಚ. ವಿ. ಎಸ್. ವಿ. ಪ್ರಸಾದ್ ಅವರು ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ವಿಶ್ವದಾದ್ಯಂತ ಸ್ಪರ್ಧಾತ್ಮಕ ವಾತಾವರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ನಿರಂತರವಾಗಿ ತಮ್ಮನ್ನು ತಾವು ನವೀಕರಿಸಿಕೊಳ್ಳಬೇಕೆಂದು ತಿಳಿಸಿದರು.

ಅಮೆರಿಕಾದ ಪರಿಸ್ಥಿತಿಯನ್ನು ಉದಾಹರಣೆಯಾಗಿ ಉಲ್ಲೇಖಿಸಿ, ಅಲ್ಲಿ ಸ್ಪರ್ಧೆ ಬಹಳ ಬೇಗ ಪ್ರಾರಂಭವಾಗುತ್ತದೆ ಮತ್ತು ಅದು ವ್ಯಕ್ತಿತ್ವವನ್ನು ಸವಾಲುಗಳನ್ನು ಎದುರಿಸಲು ಸಿದ್ಧಗೊಳಿಸುತ್ತದೆ ಎಂದು ಹೇಳಿದರು. ಜೀವನದಲ್ಲಿ ಯಶಸ್ಸು ಸಾಧಿಸಲು ಶಿಸ್ತು, ಸಮರ್ಪಣೆ ಹಾಗೂ ದೂರದೃಷ್ಟಿ ಅತ್ಯವಶ್ಯಕವೆಂದು ಅವರು ಅಭಿಪ್ರಾಯಪಟ್ಟರು.

ಗೌರವ ಅತಿಥಿಗಳಾದ ಅಮೆರಿಕಾದ Early Warning Services ಸಂಸ್ಥೆಯ ಉಪಾಧ್ಯಕ್ಷೆ ಹಾಗೂ ಹೆಡ್ ಆಫ್ ಪ್ರಾಡಕ್ಟ್ ಶ್ರೀಮತಿ ವಿಶ್ಲೇಷಾ ಪಾಟೀಲ್ ಅವರು, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಸೃಜನಶೀಲತೆ, ವ್ಯಕ್ತಿತ್ವ ವಿಕಾಸ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಅಮೆರಿಕಾದಲ್ಲಿ ಇಂತಹ ಚಟುವಟಿಕೆಗಳು ಸಾಮಾನ್ಯವಾಗಿದ್ದು, ವಿದ್ಯಾರ್ಥಿಗಳು ತಮ್ಮೊಳಗಿನ ನಾಯಕತ್ವವನ್ನು ಅರಿತುಕೊಳ್ಳಬೇಕು ಎಂದು ಸಲಹೆ ನೀಡಿದರು. ನಿರಂತರ ಅಧ್ಯಯನ ಮತ್ತು ಹೊಂದಾಣಿಕೆಯ ಮನೋಭಾವ ಇಂದಿನ ಕಾಲದ ಅಗತ್ಯವೆಂದು ಅವರು ಹೇಳಿದರು. ೦ಖ ಬಗ್ಗೆ ಮಾತನಾಡಿದ ಅವರು, ಅದನ್ನು ತಪ್ಪಿಸಲು ಸಾಧ್ಯವಿಲ್ಲದ ಕಾರಣ ಅದನ್ನು ಜವಾಬ್ದಾರಿಯುತವಾಗಿ ಮತ್ತು ಸದುದ್ದೇಶಕ್ಕಾಗಿ ಬಳಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.



ಗೌರವ ಅತಿಥಿಗಳಾದ ರಾಜಣ್ಣ ಕೊರವಿ ಅವರು ವಿದ್ಯಾರ್ಥಿಗಳು ನ್ಯಾಯ, ಗೌರವ ಮತ್ತು ಕ್ರೀಡಾಸ್ಫೂರ್ತಿಯಿಂದ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕೆಂದು ಕರೆ ನೀಡಿದರು. ನಿರ್ದೇಶಕರಾದ ಡಾ. ವಿ. ಎಂ. ಕೊರವಿ ಅವರು ಅಧ್ಯಕ್ಷೀಯ ಭಾಷಣದಲ್ಲಿ ಈ ಕಾರ್ಯಕ್ರಮವನ್ನು ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಮನೋಭಾವ, ನಾಯಕತ್ವ ಮತ್ತು ನಿರ್ವಹಣಾ ಕೌಶಲ್ಯಗಳನ್ನು ಬೆಳೆಸುವ ಉದ್ದೇಶದಿಂದ ರೂಪಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಸಂಯೋಜಕರಾದ ಪ್ರೊ. ಶ್ರೇಯಸ್ ಮುರದೇಶ್ವರ ಅವರು ಚಕ್ರವ್ಯೂಹ 2ಏ26 ಕಾರ್ಯಕ್ರಮದ ಸಮಗ್ರ ಅವಲೋಕನವನ್ನು ನೀಡಿದರು.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ನೇಮಕ

ಬಾಗಲಕೋಟೆ: ಹುನಗುಂದ ಶಿಶು ಅಭಿವೃದ್ದಿ ಯೋಜನೆಯ ವ್ಯಾಪ್ತಿಯಲ್ಲಿ ಒಟ್ಟು 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳು ಮಂಜೂರಾಗಿದ್ದು, 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಕರ್ತೆ ಹುದ್ದೆಗೆ ಮಾಸಿಕ 5500 ರೂ, ಹಾಗೂ ಕಂ ಕ್ರಷ್ ಸಹಾಯಕಿ ಹುದ್ದೆಗೆ 3 ಸಾವಿರ ರೂ.ಗಳ ಗೌರವಧನ ನಿಗಧಿಪಡಿಸಲಾಗಿದೆ.

ಷರತ್ತುಗಳ ಅನುಸಾರ ಅವಶ್ಯಕ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಶೀಲ್ ಮಾಡಿದ ಪೆಟ್ಟಿಗೆಯಲ್ಲಿ ಖುದ್ದಾಗಿ ಜೂನ್ 12 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಂಚೆ, ಕೊರಿಯರ್, ಇ-ಮೇಲ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಇರುವದಿಲ್ಲವೆಂದು ಹುನಗುಂದ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08351295080ಗೆ ಸಂಪರ್ಕಿಸಬಹುದಾಗಿದೆ.

# ಗ್ರಾಮೀಣ ಜನತೆಗೆ ತ್ವರಿತವಾಗಿ ಸ್ಪಂದಿಸಿ: ಜಿಪಂ ಸಿಇಒ ರಿಷಿ ಆನಂದ ಕಿವಿಮಾತು



**ಬೆಳಗಾವಿ ವಾರ್ತೆ ವಿಜಯಪುರ:** ಸಮಸ್ಯೆ ಹೊತ್ತು ಬರುವ ಗ್ರಾಮೀಣ ಜನತೆಗೆ ತ್ವರಿತವಾಗಿ ಪರಿಹಾರ ಕಲ್ಪಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಕಾಧಿರಿ ರಿಷಿ ಆನಂದ ಹೇಳಿದರು.

ಜಿಲ್ಲೆಯ ತಿಕೋಟಾ ತಾಲೂಕು ಪಂಚಾಯತಿ ಕಾರ್ಯಾಲಯದ ನವೀಕರಣಗೊಂಡ ಪಿಠೋಪಕರಣ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಾಲಯವು ಎಷ್ಟು ನಿಟ್ಟಾಗಿ ಅಚ್ಚುಕಟ್ಟಾಗಿ ಹಾಗೂ ಸ್ವಚ್ಛತೆಯಿಂದ ಇರುತ್ತದೇಯೋ ಅಷ್ಟು ಸಿಬ್ಬಂದಿಗಳಿಗೆ ಕೆಲಸ ನಿರ್ವಹಿಸಲು ಪ್ರೇರಣೆ ಸಿಗುತ್ತದೆ. ಇಂತಹ ಒಂದು ಉತ್ತಮ ಯೋಜನೆಯನ್ನು ಹಾಕಿಕೊಂಡು ಹಳೆಯ ಕಟ್ಟಡದಲ್ಲಿಯೇ ಸಿಬ್ಬಂದಿಗೆ ಅವಶ್ಯಕವಾಗಿ ಬೇಕಾಗಿರುವ ಟೇಬಲ್, ಕುರ್ಚಿ, ಗಣಕಯಂತ್ರ,

ಪ್ರಿಂಟರ್ಸ್, ಶೌಚಾಲಯ, ಕುಡಿಯುವ ನೀರು ಮತ್ತು ಉತ್ತಮ ಪರಿಸರ ಒದಗಿಸಿರುವ ತಾಲೂಕು ಪಂಚಾಯತಿಯ ಕಾರ್ಯವನ್ನು ಸಿಇಒ ಪ್ರಶಂಸಿಸಿದರು.

ಮುಂದಿನ ದಿನಮಾನದಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಇನ್ನೂ ಹೆಚ್ಚಿನ ಉತ್ಸಾಹದಿಂದ ಕೆಲಸ ನಿರ್ವಹಿಸಿ ತಿಕೋಟಾ ತಾಲೂಕನ್ನು ಮಾದರಿ ತಾಲೂಕನ್ನಾಗಿಸಲು ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮಗೆ ಒದಗಿಸಿರುವ ಸಲಕರಣೆಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕು. ಆ ಮೂಲಕ ಸಮಸ್ಯೆ ಹೊತ್ತು ಬರುವ ಗ್ರಾಮೀಣ ಜನರಿಗೆ ಸೂಕ್ತ ಪರಿಹಾರವನ್ನು ತ್ವರಿತವಾಗಿ ಒದಗಿಸಬೇಕು. ಜೊತೆಗೆ ಅವರೊಡನೆ ಅತ್ಯಂತ ಗೌರವಯುತವಾಗಿ ವರ್ತಿಸಬೇಕು ಎಂದರು.

ನಮ್ಮ ಕಾರ್ಯಾಲಯದ ಬಗ್ಗೆ ನಮಗೆಲ್ಲಾ ಹೆಮ್ಮೆಯಿರಬೇಕು. ಜೊತೆಗೆ ಕಾರ್ಯಾಲಯದ ಸ್ವಚ್ಛತೆಗೆ ಎಲ್ಲರೂ ಸಹಕರಿಸಬೇಕು. ಇದೇ ರೀತಿ ಎಲ್ಲಾ ಗ್ರಾಮ ಪಂಚಾಯತಿಗಳೂ ಸಹ ಜನಸ್ನೇಹಿ ಹಾಗೂ ಸಿಬ್ಬಂದಿಗಳ ಸ್ನೇಹಿಯಾಗಿ ನಿರ್ಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಮುಖ್ಯ ಯೋಜನಾಧಿಕಾರಿ ಸಿ.ಬಿ.ಕುಂಬಾರ, ತಾಲೂಕು ಪಂಚಾಯತಿಯ ಆಡಳಿತಾಧಿಕಾರಿಗಳು ಹಾಗೂ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಕಾರ್ಯನಿರ್ವಾಹಕ ಅಧಿಕಾರಿ ಬಸವಂತರಾಯಗೌಡ ಬಿರಾದಾರ, ಸಹಾಯಕ ಲೆಕ್ಕಾಧಿಕಾರಿ ಅನ್ವರಹುಸೇನ ನದಾಫ್, ತಾಲೂಕು ಯೋಜನಾಧಿಕಾರಿ ಮಹಾಂತೇಶ ಬಾಗೇವಾಡಿ, ಸಹಾಯಕ ನಿರ್ದೇಶಕರಾದ ಶೋಭಕ್ಕ ಶಿಳೀನ, ಬಸವರಾಜ ಸಂಕಗೊಂಡ ಸೇರಿದಂತೆ ತಾಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ ನಿರೂಪಿಸಿದರು. ಪಿಡಿಓ ಶ್ರೀಶೈಲ ಹಡಪದ ಸ್ವಾಗತಿಸಿದರು. ಸರ್ವಮಂಗಲಾ ಮುಪ್ಪಯ್ಯನಮಠ ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿವೃತ್ತಿ ಹೊಂದಿದ ಮಹಾದೇವ ವಾಜಂತ್ರಿ ಅವರನ್ನು ಸನ್ಮಾನಿಸಲಾಯಿತು.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ: ಸ್ಥಳೀಯ ಸಂಸ್ಥೆ ಮುಖ್ಯಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಆನಂದ ಸೂಚನೆ

**ಬೆಳಗಾವಿ ವಾರ್ತೆ ವಿಜಯಪುರ:** ಕುಡಿಯುವ ನೀರಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಸಮಸ್ಯೆ ಉಲ್ಬಣಿಸಿದರೆ ಆಯಾ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ಸಮಸ್ಯೆಯನ್ನು ತಕ್ಷಣ ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಈ ಸೂಚನೆ ನೀಡಿದರು.

ಸಾಲಿಡ್ ವೇಸ್ಟ್ ಮ್ಯಾನೇಜ್ ಮೆಂಟ್ ಏಪ್ರಿಲ್ ಒಂದರಿಂದ ಜಾರಿಗೆ ಬಂದಿದೆ. ಇದರಡಿ ನಾಲ್ಕು ರೀತಿಯ ವಿಂಗಡಣೆ ಮಾಡಿ ವಿಲೇವಾರಿ ಮಾಡಬೇಕಾಗುತ್ತದೆ. ಬಲ್ಕ್ ಜನರೇಟ್ ಲೋಕಲ್ ಬಾಡಿ ಗುರುತಿಸಿ ಅವುಗಳನ್ನು ನೋಂದಣಿ ಮಾಡಿಕೊಳ್ಳಬೇಕಾಗುತ್ತದೆ. ವಾರ್ಡ್ ವಾರು ಒಳಗೊಳ್ಳುವಂತೆ ಜಿರೋ ವಾರ್ಡ್ ಕಸ ಮುಕ್ತಗೊಳಿಸುವ ಯೋಜನೆಯಾಗಿದೆ ಎಂದರು.

ನೂರು ಜನರು ಭಾಗವಹಿಸುವ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಸ್ಥಳೀಯ ಸಂಸ್ಥೆಗಳ ಅನುಮತಿ ಪಡೆದುಕೊಳ್ಳಬೇಕಾಗುತ್ತದೆ. ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿ ಇದ್ದು, ಡಿಸಿ, ಸಿಇಒ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಎನ್ ಜಿಒ ಸೇರಿದಂತೆ ಸಮಿತಿ ಇರುತ್ತದೆ ಎಂದರು.

**ಕಸ ಕಂಡರೆ ಫೋಟೋ ಕಳಿಸಿ**

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಆರಂಭಗೊಂಡ ಕಸ ಕಂಡರೆ ಫೊ?ಟೋ ಕಳಿಸಿ ಅಭಿಯಾನಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದ್ದು, ಇನ್ನೂ ವ್ಯಾಪಕವಾಗಿ ಈ ಅಭಿಯಾನದ ಬಗ್ಗೆ ಜಾಗೃತಿ ಮೂಡಿಸಿ, ಸ್ವಚ್ಛ ನಗರವನ್ನಾಗಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಇಪ್ಪತ್ನಾಲ್ಕು ಗಂಟೆಯೊಳಗೆ ಕಸ ಕ್ಲೀಯರ್ ಮಾಡಬೇಕು. ಕೆಲ ಕಡೆ ಆಗಿದೆ. ಕೆಲವು ಕಡೆ ಆಗುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು. ಎಲ್ಲ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ಮೇಲ್ವಿಚಾರಣೆ ಮಾಡಬೇಕು. ದೂರು ಬಂದ ತಕ್ಷಣ ನಿಮ್ಮ ಕೆಳಹಂತದ ಅಧಿಕಾರಿಗಳನ್ನು ನೇಮಿಸಿ, ಬ್ಲಾಕ್ ಸ್ಪಾಟ್ ಇದ್ದಲ್ಲಿ ಒಂದೆ ಕಡೆ ಕಸ ಹಾಕುವುದನ್ನು ನಿಗಾವಹಿಸಿ ಅಲ್ಲಿ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದರು.




ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಸಂತೆ, ಜಾತ್ರೆಗಳಲ್ಲಿ ಸಂಗ್ರಹವಾಗುವ ಕಸವನ್ನು ತುರ್ತಾಗಿ ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಈಗ ವಿವಿಧ ತಜ್ಞರ ಸಮಿತಿ ರಚನೆಯಾಗಿದ್ದು, ಜಿಲ್ಲೆಯಲ್ಲಿ ಘನ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಿಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

**ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ**

ಈ ಕುರಿತು ಸಾರ್ವಜನಿಕರಿಗೆ ಸಾಕಷ್ಟು ಜಾಗೃತಿ ಮೂಡಿಸಬೇಕು. ಆದಾಗ್ಯೂ ತಪ್ಪಿದರೆ ನಿರ್ದಾಕ್ಷಿಣ್ಯವಾಗಿ ದಂಡ ವಿಧಿಸಬೇಕು ಎಂದು ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಯಾವುದೇ ದೂರುಗಳು ಬಾರದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಕುಡಿಯುವ ನೀರು ಹಾಗೂ ವೈಜ್ಞಾನಿಕ ಕಸ ವಿಲೇವಾರಿಗೆ ಪ್ರಾಥಮಿಕ ಆದ್ಯತೆ ನೀಡಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಕಸ ವಿಲೇವಾರಿ ನಿರ್ಲಕ್ಷ್ಯವಹಿಸದೇ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಎಂಆರ್ ಎಫ್ ಘಟಕ ಯೋಜನೆ ಈಗಿನಿಂದಲೇ ಮಾಡಿಕೊಳ್ಳಬೇಕು. ಅದಕ್ಕೆಂದೇ ಈಗಿನಿಂದ ಕ್ರಿಯಾ ಯೋಜನೆ ರೂಪಿಸಿಕೊಳ್ಳಬೇಕು ಎಂದರು. ಎಸ್ ಟಿಪಿ ಜಾಗೆಗೆ ಸಂಬಂಧಿಸಿದ ಸಮಸ್ಯೆ ಬಗೆಹರಿಸಿಕೊಂಡು ಕಾರ್ಯ ಪ್ರವೃತ್ತರಾಗಲು ಸೂಚಿಸಿದರು.

ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿ ಅಮೃತ ಮಿತ್ರ ಹಾಗೂ ಅಮೃತ 2.0 ಉದ್ಯಾನವನ, ಜಲ ಮೂಲಗಳ ಪುನಶ್ಚೇತನ ಕಾರ್ಯ ಕ್ರಮವನ್ನು ಸಮರ್ಪಕವಾಗಿ ಅನುಷ್ಠಾನ ಗೊಳಿಸಲು ಜಿಲ್ಲಾಧಿಕಾರಿ ಸೂಚಿಸಿದರು.

**ಬೀದಿ ನಾಯಿಗಳ ಹಾವಳಿ**

ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಲಸಿಕೆ ಹಾಕಿಸಲಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸರ್ವೋಚ್ಚ ನ್ಯಾಯಾಲಯ ಆದೇಶಿಸಿದಂತೆ ಸಾರ್ವಜನಿಕ ಸ್ಥಳ, ಸರ್ಕಾರಿ ಕಚೇರಿ, ಆಸ್ಪತ್ರೆ, ಶಾಲಾ–ಕಾಲೇಜು, ಬಸ್ ನಿಲ್ದಾಣ ಹಾಗೂ ಇನ್ನಿತರ ಜನನಿಬಿಡ ಪ್ರದೇಶಗಳಲ್ಲಿರುವ ಬೀದಿ ನಾಯಿಗಳನ್ನು ಗುರುತಿಸಿ ತಾತ್ಕಾಲಿಕ ಶೆಡ್ ನಿರ್ಮಾಣ ಮಾಡಬೇಕು. ತಾತ್ಕಾಲಿಕ ಪರಿಹಾರವಾಗಿ ಆಶ್ರಯ ತಾಣಕ್ಕೆ ಕಳುಹಿಸಬೇಕು. ಜಿಲ್ಲೆಯ ನಗರ, ಗ್ರಾಮ ಪಂಚಾಯತಿಗಳಲ್ಲಿ ಯೋಜನೆ ರೂಪಿಸಿ, ಬೀದಿ ನಾಯಿಗಳ ನಿಯಂತ್ರಣಕ್ಕೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಬೀದಿ ನಾಯಿಗಳಿಗೆ ಲಸಿಕೆ ಹಾಕಿಸಬೇಕು. ಎಬಿಸಿ ಎಲ್ಲಾ ಕಡೆ ಪೂರ್ಣಗೊಳಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಆದ್ಯತೆಯ ಮೇರೆಗೆ ಕೆಲಸ ಮಾಡಬೇಕು. ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ ಎಲ್ಲೂ ಕೂಡ ಘಟನೆ ನಡೆಯಬಾರದು ಎಂದರು.

ಬುರಣಾಪೂರ ಡಾಗ್ ಶೆಲ್ಟರ್ ಬೇಗ ಆರಂಭಿಸಲು ಕ್ರಮವಹಿಸಬೇಕು. ಜೊತೆಗೆ ಪ್ರತಿ ಸ್ಥಳೀಯ ಸಂಸ್ಥೆಗಳಲ್ಲೂ ಡಾಗ್ ಶೆಲ್ಟರ್ ಕಡ್ಡಾಯವಾಗಿ ಮಾಡಬೇಕು. ಲಸಿಕೆ ಸಾಕಷ್ಟು ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈಗಾಗಲೇ ಪಶು ಆಸ್ಪತ್ರೆಗಳಲ್ಲಿ ಲಸಿಕೆ ಲಭ್ಯವಿದ್ದು ಮಹಾನಗರ ಪಾಲಿಕೆ, ಮುಖ್ಯಾಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪಶು ಆಸ್ಪತ್ರೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮ ವಹಿಸಬೇಕು.

ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತೆ ವಹಿಸಬೇಕು. ಇದನ್ನು ಎಲ್ಲ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಪಿಎಂ ಸ್ವನಿಧಿ ಯೋಜನೆಗೆ ಕೊಟ್ಟಿರುವ ಟಾರ್ಗೆಟ್ ಮುಟ್ಟಬೇಕು. ಜಾಸ್ತಿ ಜನರು ಅರ್ಹ ಫಲಾನುಭವಿಗಳನ್ನು ಗುರುತಿಸಿ ಮಾಹಿತಿ ನೀಡಬೇಕು. ಸಬ್ಸಿಡಿ ಎಲ್ಲ ಯೋಜನೆಗಳ ಬಾಕಿ ಅರ್ಜಿ ಉಳಿಕೆಗೆ ನಿರಂತರ ಸಭೆ ನಡೆಸಿ ಸರ್ಕಾರದ ಯೋಜನೆಗಳು ಅರ್ಹರನ್ನು ತಲುಪಿಸುವ ನಿಟ್ಟಿನಲ್ಲಿ ಬಾಕಿ ಅರ್ಜಿ ವಿಲೇವಾರಿಗೆ ಕ್ರಮವಹಿಸಿ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಅವರಿಗೆ ಸೂಚಿಸಲಾಯಿತು.

## ಬೆಳಗಾವಿ: ಶಿವಾನಂದ ನೀಲಣ್ಣವರ ಬಂಧನ



**ಬೆಳಗಾವಿ ವಾರ್ತೆ ಬೆಳಗಾವಿ:** ಶಿವಂ ಅಸೋಸಿಯೇಟ್ ಸಂಸ್ಥೆಗೆ ಸಂಬಂಧಿಸಿದ ಹಣಕಾಸು ವ್ಯವಹಾರಗಳ ಪರಿಶೀಲನೆ ಬೆನ್ನಲ್ಲೇ, ಸಂಸ್ಥೆಯ ಮಾಲೀಕರೆಂದು ಹೇಳಲಾಗುತ್ತಿರುವ ಶಿವಾನಂದ ಎಸ್. ನೀಲಣ್ಣವರ ಅವರನ್ನು ಮಾಳಮಾರುತಿ ಪೊಲೀಸರು ಬಂಧಿಸಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಕಂದಾಯ, ಸಹಕಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ಶಿವಬಸವ ನಗರದಲ್ಲಿರುವ ಶಿವಂ ಅಸೋಸಿಯೇಟ್‌ನ ಎರಡು ಕಚೇರಿಗಳ ಮೇಲೆ ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸಿದ್ದರು. ಸಾರ್ವಜನಿಕರಿಂದ ಹಣ ಸಂಗ್ರಹಣೆ, ಹೆಚ್ಚಿನ ಬಡ್ಡಿ ಭರವಸೆ, ಹೂಡಿಕೆ ದಾಖಲೆಗಳು ಹಾಗೂ ಸಂಸ್ಥೆಯ ಕಾನೂನುಬದ್ಧತೆಯ ಕುರಿತು ಅಧಿಕಾರಿಗಳು ತನಿಖೆ ನಡೆಸುತ್ತಿದ್ದರು.

## ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳನ್ನು ಅರ್ಜಿ ಅಹ್ವಾನ

**ಬೆಳಗಾವಿ ವಾರ್ತೆ ಮೂಡಲಗಿ:** ಅರಭಾವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಕಾರ್ಯಾಲಯ ವ್ಯಾಪ್ತಿಯಲ್ಲಿ ಖಾಲಿಯಿರುವ 9 ಅಂಗನವಾಡಿ ಕಾರ್ಯಕರ್ತೆ ಮತ್ತು 48 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ಆಯ್ಕೆ ಮಾಡಲು ಅರ್ಹ

ಸ್ಥಳೀಯ ಮಹಿಳಾ ಅಭ್ಯರ್ಥಿಗಳ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರಿಂದ ಆಫ್ಲೈನ ಮೂಲಕ ಅರ್ಜಿಆಹ್ವಾನಿಸಲಾಗಿದೆ.ಎಂದು ಸಿಡಿಪಿಒ ಯಲ್ಲಪ್ಪ ಗದಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ನಿಗದಿತ ನಮೂನೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಮೂಡಲಗಿ ಕಚೇರಿಯಿಂದ ಪಡೆದು ಭರ್ತಿಮಾಡಿ ದಿನಾಂಕ:14/05/2026 ರಿಂದ 16/06/2026 ರ ಸಂಜೆ 5.30 ಗಂಟೆ ಒಳಗಾಗಿ ಮುಚ್ಚಿದ ಲಕೋಟೆಯಲ್ಲಿ ಶಿಶು ಅಭಿವೃದ್ಧಿ ಯೋಜನೆ ಅರಭಾವಿಯ ಮೂಡಲಗಿ ಕಾರ್ಯಾಲಯಕ್ಕೆ ಖುದ್ದಾಗಿ ಅಥವಾ ಅಂತಿಮ ದಿನಾಂಕ ಮತ್ತು ಸಮಯದೊಳಗೆ ತಲುಪುವಂತೆ ನೊಂದಾಯಿತ ಅಂಚೆ ಮೂಲಕ ಅರ್ಜಿ

ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅರಭಾವಿ ಕಾರ್ಯಾಲಯ ಮೂಡಲಗಿ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬುಹುದಾಗಿದೆ. ದೂರವಾಣಿ ಸಂಖ್ಯೆ–08334–200367.ಕ್ಕೆ ಸಂಪರ್ಕಿಸಬಹುದು.

## "ಸತೀಶ ಶುಗರ್ಸ್ ಲಿ. ಸಂಸ್ಥೆಯ ವತಿಯಿಂದ ಶೈಕ್ಷಣಿಕ ಪರಿಕರಗಳ ವಿತರಣೆ"

**ಬೆಳಗಾವಿ ವಾರ್ತೆ ಮೂಡಲಗಿ:** ಸತೀಶ ಸಮೂಹ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸತೀಶ ಜಾರಕಿಹೊಳಿಯವರ ಆಶಯದಂತೆ, ಸತೀಶ ಶುಗರ್ಸ್ ಕಾರ್ಖಾನೆಯು ಪ್ರಾರಂಭದಿಂದಲೂ ಗ್ರಾಮೀಣ ಭಾಗದ ರೈತರು, ಯುವಜನತೆ ಮತ್ತು ಬಡ ಮಕ್ಕಳ ಕಲ್ಯಾಣಕ್ಕಾಗಿ ಹಲವಾರು ಸಮಾಜಮುಖಿ ಕಾರ್ಯಗಳನ್ನು ಮಾಡುವಲ್ಲಿ ನಿರತವಾಗಿದೆ ಎಂದು ಸತೀಶ ಸಮೂಹ ಸಂಸ್ಥೆಯ ಚೇರಮನ ಮತ್ತು ಸಿ.ಎಫ್.ಓ ಪ್ರದೀಪಕುಮಾರ ಇಂಡಿ ಹೇಳಿದರು

ತಾಲ್ಲೂಕಿನ ಹುಣಶ್ಯಾಳ ಪಿಜಿ ಬಳಿಯ ಸತೀಶ ಶುಗರ್ಸ್ . ಕಾರ್ಖಾನೆಯಿಂದ ಮೂಡಲಗಿ ಶೈಕ್ಷಣಿಕ ವಲಯದ ಸುಮಾರು 31 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಕುಳಿತುಕೊಂಡು ಓದಲು ಅನುಕೂಲ ವಾಗುವ ನಿಟ್ಟಿನಲ್ಲಿ ಅವಶ್ಯಕವಿರುವ 400 ಆಸನಗಳನ್ನು ಹಾಗೂ 34 ಗ್ರೀನ ಬೋರ್ಡಗಳನ್ನು ಮೂಡಲಗಿ ಬಿಇಓ ಪಿ. ಬಿ. ಹಿರೇಮಠ ಅವರ ಮೂಲಕ ಶಿಕ್ಷಣ ಇಲಾಖೆಗೆ ಹಸ್ತಾಂತರಿಸಿ ಮಾತನಾಡಿ, ಸತೀಶ ಶುಗರ್ಸ್ ಸಮೂಹ ಸಂಸ್ಥೆಯು

ಸರ್ಕಾರಿ ಶಾಲೆಗಳಿಗೆ ಶಿಕ್ಷಣದ ಅವಶ್ಯಕ




ಮೂಡಲಗಿ: ಸತೀಶ ಶುಗರ್ಸ್ . ಕಾರ್ಖಾನೆಯಿಂದ ಮೂಡಲಗಿ ಶೈಕ್ಷಣಿಕ ವಲಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಆಸನಗಳನ್ನು ಹಾಗೂ ಗ್ರೀನ ಬೋರ್ಡ್ ಗಳನ್ನು ಬಿಇಒ ಪಿ. ಬಿ. ಹಿರೇಮಠ ಅವರ ಮೂಲಕ ಕಾರ್ಖಾನೆಯ ಸಿ.ಎಫ್.ಓ ಪ್ರದೀಪಕುಮಾರ ಇಂಡಿ ಮತ್ತಿತರು ಶಿಕ್ಷಣ ಇಲಾಖೆಗೆ ಹಸ್ತಾಂತರಿಸಿದರು.

ಪರಿಕರಗಳನ್ನು ಹಾಗೂ ಕಲಿಕಾ ಉಪಕರಣ ಗಳನ್ನು ನೀಡುವ ಮೂಲಕ ಗ್ರಾಮೀಣ ಪ್ರದೇಶದ ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುತ್ತಿದೆ. ಸಮಾಜದ ಆಸ್ತಿಯನ್ನಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರವು ಮಹತ್ವದಾಗಿದ್ದು ಪ್ರಸಕ್ತ 2025–26 ನೇ ಶೈಕ್ಷಣಿಕ ಸಾಲಿನಲ್ಲಿ ಅಥಣಿ ತಾಲೂಕಿನ ಕಟಗೇರಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಫಲಿತಾಂಶವು ತಮ್ಮ ಶ್ರಮಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯಿಂದ ಪಡೆಯುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಕ ವೃಂದವು ತಮ್ಮ ಶಾಲಾ ಮಕ್ಕಳ ಸಮಗ್ರ ಅಭ್ಯುದಯಕ್ಕೆ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪಿ. ಬಿ. ಹಿರೇಮಠ ಮಾತನಾಡಿ, ಸತೀಶ ಶುಗರ್ಸ್ ಸಂಸ್ಥೆಯು ಹಲವಾರು ವರ್ಷಗಳಿಂದ ಶೈಕ್ಷಣಿಕ ವಲಯಕ್ಕೆ ನೀಡುತ್ತಿರುವ ನಿರಂತರ ಸಹಾಯ–ಸಹಕಾರವನ್ನು ಶಿಕ್ಷಣ ಇಲಾಖೆ ಯಾವಾಗಲೂ ಸ್ಮರಿಸುತ್ತಿದೆ ಎಂದರು.

ಶಿಕ್ಷಣ ಇಲಾಖೆಯಿಂದ ಪ್ರದೀಪಕುಮಾರ ಇಂಡಿ ಮತ್ತು ಹಿರಿಯ ಅಧಿಕಾರಿಗಳನ್ನು, ಆಸನ ಮತ್ತು ಗ್ರೀನ್ ಬೋರ್ಡ ತಯಾರಕ ಮೌನೇಶ ಕಂಬಾರ ಅವರನ್ನು ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಮೂಡಲಗಿ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ ಹಿರೇಮಠ ಹಾಗೂ ಸಂಸ್ಥೆಯ ಉಪಾಧ್ಯಕ್ಷರಾದ ಪಿ.ಡಿ. ಹಿರೇಮಠ ವೀರು ತಳವಾರ, ದಿಲೀಪ ಪವಾರ, ಆಡಳಿತ ವಿಭಾಗದ ವ್ಯವಸ್ಥಾಪಕ ಗಿರೀಶ ಸೋನವಾಲ್ಕರ, ಮಾನವ ಸಂಪನ್ಮೂಲ ವಿಭಾಗದ ಉಪ ವ್ಯವಸ್ಥಾಪಕ ಸದಾಶಿವ ಮಾಲಗಾರ ಮತ್ತು ಮೂಡಲಗಿ ವಲಯದ ಸಂಬಂಧಿತ ಶಾಲಾ ಮುಖ್ಯೋಪಾಧ್ಯಾಯರುಗಳು ಉಪಸ್ಥಿತರಿದ್ದರು.

ಶಿಕ್ಷಣ ಸಂಯೋಜಕರಾದ ಆರ್. ವಿ. ಯರಗಟ್ಟಿ ಸ್ವಾಗತಿಸಿದರು, ಬಿ. ಎನ್. ಕುರುಬಚನ್ನಾಳ ವಂದಿಸಿದರು.

## 2 ಕೋಟಿ ರೂ ವೆಚ್ಚದ ಬ್ರಿಜ್ ಕಂ ಬಾಂದಾರ ಕಾಮಗಾರಿಗೆ ಚಾಲನೆ

**ಬೆಳಗಾವಿ ವಾರ್ತೆ ಮೋಳೆ;–** ಮಳೆಯಿಂದ ಹಳ್ಳ,ಕೊಳ್ಳಗಳ ಮೂಲಕ ಹರಿದು ಹೋಗುವ ನೀರನ್ನು ತಡೆಗಟ್ಟಿಸುವದರಿಂದ ಭಾವಿ,ಕೊಳವೆ ಭಾವಿಗಳ ಅಂತರಜಲ ಮಟ್ಟ ಹೆಚ್ಚಾಗಲಿದ್ದು,ಇದರಿಂದ ರೈತರಿಗೆ ಅನುಕೂಲವಾಗಲಿದೆ ಎಂದು ಕಾಂಗ್ರೆಸ್ ಮುಖಂಡ ರಾಜಕುಮಾರ ಕುಳ್ಳೊಳ್ಳಿ ಹೇಳಿದರು.

ಅವರು ಶುಕ್ರವಾರ ಕಾಗವಾಡ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮಲಾಬಾದ ಗ್ರಾಮದ ವಜ್ರವಾಡ ಹಳ್ಳಕ್ಕೆ 2 ಕೋಟಿ ರೂ ವೆಚ್ಚದ ಬ್ರಿಜ್ ಕಂ ಬಾಂಧಾರ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು.

ಅನಂತಪೂರ, ಮಲಾಬಾದ ಸೇರಿದಂತೆ ಈ ಭಾಗವು ಸತತ ಬರಗಾಲದಿಂದ ಬಳಲುತ್ತಿದ್ದು, ಇದನ್ನು ಕಂಡ ಕಾಗವಾಡ ಶಾಸಕ ರಾಜು ಕಾಗೆಯವರು ವಜ್ರವಾಢ ಹಳ್ಳಕ್ಕೆ 2 ಕೋಟಿ ರೂ ಅನುದಾನ ಮಂಜೂರು ಮಾಡಿಸಿದ್ದಾರೆ. ಈ ಬ್ರಿಜ್ ಕಂ ಬಾಂದಾರ ನಿರ್ಮಾಣವಾಗುವದರಿಂದ ಸಾವಿರಾರು ರೈತರಿಗೆ ಅನುಕೂಲವಾಗಲಿದೆ ಎಂದರು. ಶಾಸಕ ರಾಜು ಕಾಗೆಯವರು ಖಿಳೇಗಾಂವ, ಆಜೂರ, ಶಿರೂರ, ಸಂಬರಗಿ, ಸೇರಿದಂತೆ 20 ಗ್ರಾಮಗಳ ಮುಖಾಂತರ ಹಾದು ಹೋಗುವ ಅಗ್ರಹಾಣಿ 30ಕ್ಕೂ ಹೆಚ್ಚು ಬ್ರಿಜ್ ಕಂ ಬಾದಾಂರ ನಿರ್ಮಿಸಿರುವದರಿಂದ ಈ ವರ್ಷ ರೈತರಿಗೆ ಬೇಸಿಗೆಯ ಕಾಲದಲ್ಲಿ ನೀರಿನ ಸಮಸ್ಯೆಯಾಗಿಲ್ಲವೆಂದವರು ಶಾಸಕ ರಾಜು ಕಾಗೆಯವರನ್ನು ನಾವು ಅಭಿನಂಧಿಸುತ್ತೇವೆ ಎಂದರು.

ಗ್ರಾಮದ ಹಿರಿಯರಾದ ಮಹಾದೇವ ಗೌಡ ಪಾಟೀಲ ಮಾತನಾಡಿ ವಜ್ರವಾಡ ಹಳ್ಳಕ್ಕೊಂದು ಬ್ರಿಜ್ ಕಂ ಬಾಂದಾರ ನಿರ್ಮಿಸುವಂತೆ ಗ್ರಾಮಸ್ಥರೆಲ್ಲರು ಕೂಡಿಕೊಂಡು ಶಾಸಕ ರಾಜು ಕಾಗೆಯವರಿಗೆ ಮನವಿ ಮಾಡಿಕೊಂಡಿ ದ್ದೇವು. ನಮ್ಮ ನಮ್ಮ ಮನವಿಗೆ ಸ್ಪಂದಿಸಿ 2 ಕೋಟಿ ರೂ ವೆಚ್ಚದ ಕಾಮಗಾರಿ ಮಂಜೂರು ಮಾಡಿಸಿ



ಮೋಳೆ: ಮಲಾಬಾದ ಗ್ರಾಮದ ವಜ್ರವಾಡ ಕಳ್ಳಕ್ಕೆ 2 ಕೋಟಿ ರೂ ವೆಚ್ಚದ ಬ್ರಿಜ್ ಕಂ ಬಾಂದಾರ ಕಾಮಗಾರಿಗೆ ಕಾಂಗ್ರೆಸ್ ಮುಖಂಡ ರಾಜಕುಮಾರ ಕುಳ್ಳೊಳ್ಳಿ ಭೂಮಿ ಪೂಜೆ ನೆರವೇರಿಸುತ್ತಿರುವ ಚಿತ್ರ.

ಕೊಟ್ಟಿರುವುದರಿಂದ ರೈತರಿಗೆ ಅನುಕೂಲವಾಗಲಿದೆ ಎಂದರು. ಚಿಕ್ಕ ನೀರಾವರಿ ಇಲಾಖೆಯ ಇಂಜನೀಯರ ಜಿ.ಎನ್. ಆಸಂಗಿ ಮಾತನಾಡಿ ಈ ಯೋಜನೆಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಿ ನೀರು ಹಿಡಿಯುವುದಾಗಿ ಹೇಳಿದರು.

ಈ ವೇಳೆ ಗುತ್ತಿಗೆದಾರ ಸದಾಶಿವ ದಳವಾಯಿ, ಮುಖಂಡರಾದ ರಾಜಕುಮಾರ ಕುಳ್ಳೊಳ್ಳಿ, ಅಸ್ಕಕ ಘಟನಟ್ಟಿ, ಶ್ರೀಶೈಲ ಖೊತ, ಮಹಾದೇವಗೌಡ ಪಾಟೀಲ, ಶಿವಾನಂದ ಕುಳ್ಳೊಳ್ಳಿ, ಶಿದರಾಯ ಗಸ್ತಿ, ಹಣಮಂತ ಕುಳ್ಳೊಳ್ಳಿ, ಮಹಾದೇವ ಮಾನೆ, ರಮೇಶ ಕುರುಬರ, ರಾಜು ಕಾಂಬಳೆ ಸೇರಿದಂತೆ ಅನೇಕರು ಇದ್ದರು.

## ಗಾಂಧೀಜಿಯ ತತ್ವಗಳ ಅನುಕರಣೆಯೇ ಇಂದಿನ ಅವಶ್ಯಕತೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರ:** ಗಾಂಧೀಜಿಯವರ ತತ್ವಗಳನ್ನು ಪ್ರತಿಯೊಬ್ಬರು ನಿತ್ಯ ಜೀವನದಲ್ಲಿ ಅನುಕರಣೆ ಮಾಡಿಕೊಳ್ಳುವುದು ಸಮಾಜಕ್ಕೆ ಮುಖ್ಯವಾಗಿದೆ ಎಂದು ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಸಂಚಾಲಕಿ ಡಾ. ಅಭೀದಾ ಬೇಗಂ ಹೇಳಿದರು.

ಕಿನಾವಿವ ಸಂಘದ ಕಲಾ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದ ಕನ್ನಡ ವಿಭಾಗ, ರಾಷ್ಟ್ರೀಯ ಸೇವಾ ಯೋಜನೆ ಕೋಶ, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಬೆಂಗಳೂರು, ಕರ್ನಾಟಕ ಸರಕಾರ ಯುವಜನ ಸೇವಾ ಇಲಾಖೆ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ "ಇಂದಿನ ಯುವ ಜನತೆಗೆ ಗಾಂಧೀ ವಿಚಾರಧಾರೆಗಳು" ಎಂಬ ವಿಷಯದ ಕುರಿತು ರಾಜ್ಯ ಮಟ್ಟದ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿ ಗಾಂಧೀಜಿಯವರು ನೀಡಿರುವ ತತ್ವಗಳನ್ನು ನಮ್ಮ ದೈನಂದಿನ ಜೀವನದಲ್ಲಿ ನಾವು ಅಳವಡಿಸಿಕೊಂಡು ನಮ್ಮನ್ನು ನಾವು ಸುಧಾರಿಸಿಕೊಂಡರೆ ಈಡೀ ಸಮಾಜವನ್ನೇ ಸುಧಾರಿಸಲು ಸಾಧ್ಯ. ಸಮಯ ಪಾಲನೆ, ಕರ್ತವ್ಯನಿಷ್ಠೆ, ಯಾರಿಗೂ ಅನ್ಯಾಯ ವಾಗದೇ ನಾವು ನಡೆದಕೊಳ್ಳಬೇಕೆಂದರು.

ಅಧ್ಯಕ್ಷೀಯ ಭಾಷಣವನ್ನಾಡಿದ ಕಿನಾವಿವ ಸಂಘದ ಮಾಜಿ ಚೇರಮನ್ನ ಜೆ. ವ್ಹಿ. ವಸ್ತ್ರದ ಮಾತನಾಡಿ ಗಾಂಧೀ ಎಂಬುದು ಇಡೀ ಪ್ರಪಂಚಕ್ಕೆ ಒಂದು ಆದರ್ಶ ಹಾಗೂ ಪ್ರೇರಣಾದಾಯಕ ಶಕ್ತಿಯಾಗಿದೆ. ಗಾಂಧೀಜೀಯವರ ಬದುಕು ನಮಗೆಲ್ಲ ಪ್ರೇರಣಾದಾಯಕವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಕಿನಾವಿವ ಸಂಘದ ಚೇರಮನ್ನ ಶಂಕರ ಎಸ್ ವಳಸಂಗ, ವಾಯಿಸ್– ಚೇರಮನ್ನ ಜಗದೀಶ ಬಿ ಘಟ್ನಟ್ಟಿ ಐಕ್ಯೂಎಸಿ ಕೋ–ಆರ್ಡಿನೇಟರ್ ರವಿ ಹವಿನಾಳೆ, ಡಾ. ಶಿವಾನಂದ ಶೆಟ್ಟರ, ಪ್ರೊ ಎ ಕೆ ಕರೆಪ್ಪನವರ, ಗೀತಾ ಲಂಗೋಟಿ, ಡಾ. ಸಂಗೀತಾ ತೋಲಗಿ. ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಡಾ. ಹೊನ್ನರಾಜು ಎಸ್. ವ್ಹಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಚಾರ್ಯ ನಾಗರಾಜ ಎಚ್.ಕೆ ಸ್ವಾಗತಿಸಿ ಅತಿಥಿಗಳನ್ನು ಪರಿಚಯಿಸಿದರು. ರಮ್ಯಾ ನಾಗಲಾಪೂರ ಮತ್ತು ಸಂಗಡಿಗರು ಗಾಂಧೀ ಭಜನೆಯನ್ನು ಹಾಡಿದರು. ವಂದನಾರ್ಪಣೆ ಪಿ.ಬಿ.ಹೊನ್ನಪ್ಪನವರ , ಸಿ.ಎಮ್.ಗರಗದನಿರೂಪಿಸಿದರು.

## ಗ್ರಾಮದೇವಿಯ ಜಾತ್ರಾ ಮಹೋತ್ಸವ

**ಬೆಳಗಾವಿ ವಾರ್ತೆ ನವಲಗುಂದ:** ಗ್ರಾಮೀಣ ಸಂಸ್ಕೃತಿ, ಭಕ್ತಿ ಮತ್ತು ಜನರ ಒಗ್ಗಟ್ಟಿನ ಪ್ರತೀಕವಾಗಿರುವ ಇಂತಹ ಜಾತ್ರಾ ಮಹೋತ್ಸವಗಳು ನಮ್ಮ ಪರಂಪರೆಯ ಜೀವಾಳವಾಗಿವೆ. ಭಕ್ತರ ಭಾವನೆ, ಸಂಭ್ರಮ ಹಾಗೂ ನಂಬಿಕೆಯಿಂದ ತುಂಬಿದೆ ಎಂದು ಶಾಸಕ ಎನ್.ಎಚ್ ಕೋನರಡ್ಡಿ ಹೇಳಿದರು.

ತಾಲೂಕಿನ ಹಣಸಿ ಗ್ರಾಮದಲ್ಲಿ ನಡೆದ ಶ್ರೀ ಗ್ರಾಮದೇವಿಯ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹೊಸರಿತ್ತಿ ಗುದ್ದಲೀಶ್ವರ ಮಹಾಸ್ವಾಮಿಗಳು, ಚಿಕ್ಕುಂಬಿ ನಾಗಲಿಂಗ ಸ್ವಾಮಿಗಳು ಹಾಗೂ ಮಾನಕವಾಡ ಶ್ರೀ ಅನ್ನದಾನೇಶ್ವರ ಮಠದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯವನ್ನು ವಹಿಸಿದ್ದರು.

ಈ ಸಂದರ್ಭದಲ್ಲಿ ಪಿಎಸ್ಐ ಉಮಾದೇವಿ, ಎಂ.ಎಸ್. ರೋಣದ ,



ಶಾಂತವ್ವ ಗುಜ್ಜಳ, ಸಂತೋಷ್ ಗುಜ್ಜಳ, ಅರುಣಕುಮಾರ್ ಮಜ್ಜಗಿ, ರಾಮಪ್ಪ ನಾಯ್ಕರ್, ಈರಪ್ಪ ಮಾಳವಾಡ್, ಎಂ.ಎಂ. ಗುಜ್ಜಳ, ಸಂಜೀವ ಕೇಸರಿ, ಸೋಮಲಿಂಗ ಉಡಕೇರಿ, ವೀರನಗೌಡ ಹುಡೆದ್, ನೀಲಪ್ಪ ಕುರ್ಲಗೇರಿ, ಪ್ರವೀಣ್ ನಾಯ್ಕರ್, ಮುದಕಪ್ಪ ಮುಗಳಿ, ಜಿ.ಎ. ಪಾಟೀಲ, ಪರಮೇಶ್ ಹೊಸವಾಳ, ಸುರೇಶ್ ಬೆಡಸೂರ, ಕಲ್ಮೇಶ ದಳವಾಯಿ, ಮೌಲಾಸಾಬ ಮುರ್ತೋಜಿ, ನಿಂಗಪ್ಪ ಬಡ್ಡಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

## ಕರ್ನಾಟಕ ಪರ ಗೊತ್ತುವಳಿ ಅಂಗೀಕರಿಸದಿದ್ದರೆ ಪಾಲಿಕೆ ಸೂಪರ್‌ಸೀಡ್‌ಗೆ ಒತ್ತಾಯ



**ಬೆಳಗಾವಿ ವಾರ್ತೆ ಬೆಳಗಾವಿ:** 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂಬ ಒಂದು ಸಾಲಿನ ಕರ್ನಾಟಕ ಪರ ಗೊತ್ತುವಳಿಯನ್ನು ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಅಂಗೀಕರಿಸಬೇಕು ಎಂಬ ಬೇಡಿಕೆ ಈಗ ರಾಜ್ಯ ರಾಜಕೀಯದ ಕೇಂದ್ರಬಿಂದುವಾಗು ತ್ತಿದೆ. ಮಾರ್ಚ್ 26ರಿಂದ ಬೆಳಗಾವಿಯಲ್ಲಿ ಹೋರಾಟ ನಡೆಸುತ್ತಿರುವ ಕನ್ನಡ ಪರ ಸಂಘಟನೆಗಳ ಆಕ್ರೋಶ ಶುಕ್ರವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಬಾಗಿಲಿಗೆ ತಲುಪಿದೆ.

ಕರ್ನಾಟಕ ರಕ್ಷಣಾ ವೇದಿಕೆ ಶಿವರಾಮೇಗೌಡ ಬಣದ ರಾಜ್ಯಾಧ್ಯಕ್ಷ ಎಲ್. ಶಿವರಾಮೇಗೌಡ ಅವರು ಬೆಂಗಳೂರಿನಲ್ಲಿ ವಿಜಯೇಂದ್ರ ಅವರನ್ನು ಭೇಟಿ ಮಾಡಿ, ಬೆಳಗಾವಿ ಪಾಲಿಕೆಯಲ್ಲಿ ನಡೆದ ಬೆಳವಣಿಗೆಗಳ ಕುರಿತು ಸಮಗ್ರ ಚರ್ಚೆ ನಡೆಸಿದರು. ಕರ್ನಾಟಕ ಪರ ಗೊತ್ತುವಳಿ ಅಂಗೀಕರಿಸಲು ಬೆಳಗಾವಿ ಮಹಾಪೌರರು ಹಾಗೂ ಉಪ ಮಹಾಪೌರರಿಗೆ ಪಕ್ಷದ ಮಟ್ಟದಲ್ಲೇ ಸ್ಪಷ್ಟ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ಕನ್ನಡ ನಾಡು, ನುಡಿ ಮತ್ತು ಗಡಿ ಹಿತಾಸಕ್ತಿಯ ವಿಚಾರದಲ್ಲಿ ಬಿಜೆಪಿ ಬದ್ಧವಾಗಿದೆ. ಬೆಳಗಾವಿ ವಿಷಯದಲ್ಲಿ ತಾವು ಮಧ್ಯಪ್ರವೇಶಿಸುವುದಾಗಿ ವಿಜಯೇಂದ್ರ ಭರವಸೆ ನೀಡಿದ್ದಾರೆ ಎಂದು ಕರವೇ ಮುಖಂಡರು ತಿಳಿಸಿದ್ದಾರೆ.

ಇನ್ನೊಂದೆಡೆ, ಈ ವಿಚಾರದಲ್ಲಿ ರಾಜ್ಯದ ಪ್ರಮುಖ ಸಾಹಿತಿಗಳು, ಚಿಂತಕರು ಮತ್ತು ನಾಡಪರ ಹೋರಾಟಗಾರರೂ ಪಾಲಿಕೆಯ ನಿಲುವನ್ನು ಖಂಡಿಸಿ ಧ್ವನಿ ಎತ್ತಿದ್ದಾರೆ. ಡಾ. ಕೆ. ಮರುಳಸಿದ್ಧಪ್ಪ, ಡಾ. ಜಿ. ರಾಮಕೃಷ್ಣ, ಪ್ರೊ. ಎಸ್.ಜಿ. ಸಿದ್ಧರಾಮಯ್ಯ, ಡಾ. ವಿಜಯಾ ಜಾಣಗೆರೆ, ವೆಂಕಟರಾಮಯ್ಯ, ಡಾ. ಬಂಜಗೆರೆ ಜಯಪ್ರಕಾಶ್, ಆರ್.ಜಿ. ಹಳ್ಳಿ ನಾಗರಾಜ್ ಹಾಗೂ ಡಾ. ವಸುಂಧರಾ ಭೂಪತಿ ಅವರು 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂಬ ಠರಾವು ಹೊರಡಿಸಲು ಪಾಲಿಕೆಗೆ ಆಗ್ರಹಿಸಿದ್ದಾರೆ.

ಮಹಾಜನ್ ಆಯೋಗ ಬೆಳಗಾವಿ ಕರ್ನಾಟಕದ ಭಾಗವೆಂದು ಸ್ಪಷ್ಟಪಡಿಸಿ ದಶಕಗಳೇ ಕಳೆದಿದ್ದರೂ, ಬೆಳಗಾವಿ ಪಾಲಿಕೆಯಲ್ಲಿರುವ ಜನಪ್ರತಿನಿಧಿಗಳಿಗೆ ಈ ಐತಿಹಾಸಿಕ ಮತ್ತು ಭಾವನಾತ್ಮಕ ಸತ್ಯ ಅರ್ಥವಾಗದಿರುವುದು ವಿಷಾದನೀಯ ಎಂದು ಅವರು ಹೇಳಿದ್ದಾರೆ. ಕನ್ನಡ ನಾಡು, ನುಡಿ ಮತ್ತು ಗಡಿಯ ಹಿತಾಸಕ್ತಿಯ ಪ್ರಶ್ನೆಯಲ್ಲಿ ಪಾಲಿಕೆಯ ಜಾಣ ಕಿವುಡುತನ ನಾಚಿಕೆಗೇಡಿನ ಸಂಗತಿ ಎಂದು ಸಾಹಿತಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಬಿಜೆಪಿ ಆಡಳಿತವಿದ್ದರೂ, 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂದು ಹೇಳುವ ಧೈರ್ಯ ತೋರದೆ ಕಾನೂನು ನೆಪ ಮುಂದಿಡುತ್ತಿರುವ ಮೇಯರ್ ಉಪಮೇಯರ್ ನಿಲುವು ಕನ್ನಡ ಸಂಘಟನೆಗಳ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. "ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಬೇಕು" ಎಂಬ ಠರಾವುಗಳನ್ನು ಎಂಇಎಸ್ ಆಡಳಿತದ ಕಾಲದಲ್ಲಿ ಪಾಲಿಕೆಯಲ್ಲಿ ಮಂಡಿಸಲಾಗಿತ್ತು. ಆದರೆ ಇಂದು ಕರ್ನಾಟಕ ಪರ ಠರಾವಿಗೆ ಮೀನಮೇಷ ಎಣಿಸುವುದು ನಾಡದ್ರೋಹಿ ಧೋರಣೆ ಎಂದು ಸಂಘಟನೆಗಳು ಕಿಡಿಕಾರಿವೆ.

"ಯಾರಾದರೂ ನ್ಯಾಯಾಲಯದ ಬಾಗಿಲು ತಟ್ಟಿದರೆಂದು ರಾಜ್ಯದ ಭಾಗವಾಗಿರುವ ನಗರ ಕುರಿತು ಮೌನ ವಹಿಸುವುದು ಸರಿಯಲ್ಲ. ಕೋರ್ಟ್ ನೆಪ ಹೇಳಿ ಕರ್ನಾಟಕ ಪರ ನಿಲುವಿನಿಂದ ಹಿಂದೆ ಸರಿಯುವುದು ಪಾಲಿಕೆಗೆ ಶೋಭೆ ತರುವುದಿಲ್ಲ" ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.

ಈ ಕೂಡಲೇ ಬೆಳಗಾವಿ ಮಹಾನಗರ ಪಾಲಿಕೆ 'ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ' ಎಂಬ ಗೊತ್ತುವಳಿಯನ್ನು ಅಂಗೀಕರಿಸಬೇಕು. ವಿಫಲವಾದರೆ ಪಾಲಿಕೆಯನ್ನು ಸೂಪರ್‌ಸೀಡ್ ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ಕನ್ನಡ ಪರ ಸಂಘಟನೆಗಳು ಎಚ್ಚರಿಕೆ ನೀಡಿವೆ.

ವಿಜಯೇಂದ್ರ ಅವರನ್ನು ಭೇಟಿಯಾದ ನಿಯೋಗದಲ್ಲಿ ಕರವೇ ಬೆಂಗಳೂರು ನಗರ ಅಧ್ಯಕ್ಷ ಶಂಕರ್, ಸಮರ ಸೇನೆಯ ಅಧ್ಯಕ್ಷ ಜಗದೀಶ್ ಗೌಡ್ರ, ರಾಜ್ಯ ಮಾಧ್ಯಮ ಸಂಚಾಲಕ ಜೈ ಕುಮಾರ್, ರಾಜ್ಯ ಯುವ ಘಟಕದ ಅಧ್ಯಕ್ಷ ಕನ್ನಡ ಕುಮಾರ್, ರಾಜ್ಯ ವಿದ್ಯಾರ್ಥಿ ಘಟಕದ ಅಧ್ಯಕ್ಷ ಯಲಹಂಕ ಗುರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001